EMAIL : dairyadadaari@gmail.com ಸಂಪುಟ: 01 ಸಂಚಿಕೆ: 150

ಬೆಲೆ ರೂ : 2.00

ರಾಯಚೂರು

ಪುಟ: 4

ನಿಮ್ಮ ನಂಬಿಕೆಯ ಧ್ವನಿ

# ಧೈರ್ಯದ ದಾರಿ

DAIRYADA DAARI NEWS PAPER

ಸಂಪಾದಕರು : ಸೈಯದ್ ಅಹ್ಮದ್ ಹುಸೇನಿ ಮತವಾಲೆ

Cell : 6360866626, 9036887793

KANNADA DAILY NEWS PAPER

ಕನ್ನಡ ದಿನಪತ್ರಿಕೆ

DAIRYADA DAARI

RNI NO: KNKAN/25/A2795 ಶುಕ್ರವಾರ: 22–05–2026


# ನೀಟ್ ಅಕ್ರಮ: ಕೈ ಪ್ರತಿಭಟನೆ

**ಬೆಂಗಳೂರು, ಮೇ 21–** ವೈದ್ಯಕೀಯ ಕೋರ್ಸ್‌ನ ಪ್ರವೇಶ ಪರೀಕ್ಷೆಯಾದ ನೀಟ್‌ನಲ್ಲಿ ನಡೆದಿರುವ ಅಕ್ರಮ ವಿರುದ್ಧ ಕಾಂಗ್ರೆಸ್ ಪಕ್ಷ ಬೆಂಗಳೂರಿನಲ್ಲಿಂದು ಬೃಹತ್ ಪ್ರತಿಭಟನಾ ಧರಣಿ ನಡೆಸಿ ನೀಟ್ ವ್ಯವಸ್ಥೆ ವಿರುದ್ಧ ಆಕ್ರೋಶ ವ್ಯಕ್ತಪಡಿಸಿತು.

ಬೆಂಗಳೂರಿನ ಸ್ವತಂತ್ರ ಉದ್ಯಾನವನದಲ್ಲಿ ಯುವ ಕಾಂಗ್ರೆಸ್ ಹಮ್ಮಿಕೊಂಡಿದ್ದ ಈ ಪ್ರತಿಭಟನಾ ಸಭೆಯಲ್ಲಿ ಮುಖ್ಯಮಂತ್ರಿ ಸಿದ್ದರಾಮಯ್ಯ, ರಾಜ್ಯ ಕಾಂಗ್ರೆಸ್ ಉಸ್ತುವಾರಿ ರಣದೀಪ್ ಸಿಂಗ್ ಸುರ್ಜೇವಾಲಾ ಸೇರಿದಂತೆ ಹಲವು ಸಚಿವರು, ಶಾಸಕರು ಸಂಸದರು, ಮುಖಂಡರು ಸೇರಿದಂತೆ ಸಾವಿರಾರು ಭಾಗಿಯಾಗಿ ನೀಟ್ ಅಕ್ರಮನ್ನು ಖಂಡಿಸಿ, ಕೇಂದ್ರ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ನೀಟ್ ಪರೀಕ್ಷೆಯ ಅಕ್ರಮದ ಕುರಿತು ಉನ್ನತ ಮಟ್ಟದ ಸಮಗ್ರ ಮತ್ತು ಪಾರದರ್ಶಿಕೆ ತನಿಖೆ ಆಗಬೇಕು. ವಿದ್ಯಾರ್ಥಿಗಳ ಭವಿಷ್ಯವನ್ನು ಹಾಳು ಮಾಡಿದ ತಪ್ಪಿತಸ್ಥರ ವಿರುದ್ಧ ಕಠಿಣ ಕ್ರಮ ಜರುಗಿಸಬೇಕು ಎಂದು ಪ್ರತಿಭಟನಾನಿರತ ಯುವ ಕಾಂಗ್ರೆಸ್ ನಾಯಕರು ಆಗ್ರಹಿಸಿದರು.

ನೀಟ್ ಪರೀಕ್ಷಾ ಅಕ್ರಮಕ್ಕೆ ಕೇಂದ್ರ ಸರ್ಕಾರವೇ ಹೊಣೆ. ಪ್ರಧಾನಿ ನರೇಂದ್ರ ಮೋದಿ ಮತ್ತು ಕೇಂದ್ರದ ಮಾನವ ಸಂಪನ್ಮೂಲ ಸಚಿವ ಧರ್ಮೇಂದ್ರ ಪ್ರಧಾನ್ ನೈತಿಕ ಹೊಣೆ ಹೊತ್ತು ರಾಜೀನಾಮೆ ನೀಡಬೇಕು ಎಂದು ಕಾಂಗ್ರೆಸ್ ನಾಯಕರು ಒಕ್ಕೊರಲಿನಿಂದ ಆಗ್ರಹಿಸಿದರು.




ಈ ವರ್ಷ ದೇಶಾದ್ಯಂತ 22 ಲಕ್ಷಕ್ಕೂ ಹೆಚ್ಚು ವಿದ್ಯಾರ್ಥಿಗಳು ನೀಟ್ ಪರೀಕ್ಷೆ ಬರೆದಿದ್ದರು. ನೀಟ್ ರದ್ದುಗೊಳಿಸಿರುವುದರಿಂದ ಈ ವಿದ್ಯಾರ್ಥಿಗಳಿಗೆ ಅನ್ಯಾಯವಾಗಿದೆ. ನೀಟ್ ರದ್ದುಗೊಳಿಸಿರುವ ನಿರ್ಧಾರ ಕೇಂದ್ರ ಸರ್ಕಾರದ ಆಡಳಿತಾತ್ಮಕ ವೈಫಲ್ಯ ಎಂದು ಕಾಂಗ್ರೆಸ್ ನಾಯಕರು ಕಿಡಿಕಾರಿದರು.

ನೀಟ್ ರದ್ದು ಮಾಡಿ ಮರು ಪರೀಕ್ಷೆ ನಡೆಸುವ ಮೂಲಕ ಕೇಂದ್ರ ಸರ್ಕಾರ ಯುವ ಜನತೆಗೆ ದ್ರೋಹ ಬಗೆದಿದೆ. ನೀಟ್ ಅಕ್ರಮಕ್ಕೆ ಕೇಂದ್ರವೇ ಹೊಣೆ ಹೊರಬೇಕು ಎಂದು ಪ್ರತಿಭಟನಾನಿರತ ಕಾಂಗ್ರೆಸ್ ನಾಯಕರು ಒತ್ತಾಯಿಸಿದರು.

ನೀಟ್ ಅಕ್ರಮದ ಆರೋಪಿಗಳ ಜತೆ ಕೇಂದ್ರ ಶಿಕ್ಷಣ ಸಚಿವ ಧರ್ಮೇಂದ್ರ ಪ್ರಧಾನ್ ನಂಟು ಹೊಂದಿದ್ದಾರೆ. ಅವರು ಸಹ ಸಚಿವ ಸ್ಥಾನಕ್ಕೆ ರಾಜೀನಾಮೆ ನೀಡಬೇಕು ಎಂದು ಕೈ ನಾಯಕರು ಆಗ್ರಹಿಸಿದರು.

ನೀಟ್ ಬೇಡ, ನಾವೇ ಪರೀಕ್ಷೆ ನಡೆಸುತ್ತೇವೆ: ನೀಟ್ ಪರೀಕ್ಷೆಯನ್ನು ರದ್ದು ಮಾಡಿ ಮೊದಲಿನಂತೆ ಆಯಾ ರಾಜ್ಯಗಳಿಗೆ ವೈದ್ಯಕೀಯ ಕೋರ್ಸ್‌ಗಳ ಸಾಮಾನ್ಯ ಪ್ರವೇಶ ಪರೀಕ್ಷೆ ನಡೆಸಲು ಅವಕಾಶ ನೀಡಬೇಕು ಎಂಬ ಹಕ್ಕೋತ್ತಾಯವನ್ನು ಈ ಪ್ರತಿಭಟನೆ ಮೂಲಕ ಮಂಡಿಸಲಾಯಿತು. ನೀಟ್ ಪರೀಕ್ಷೆಯಲ್ಲಿ ಪದೇ ಪದೇ ಅಕ್ರಮಗಳಾಗುತ್ತಿವೆ. ನೀಟ್ ಪರೀಕ್ಷೆ ಪಾರದರ್ಶಕವಾಗಿ ನಡೆಯುತ್ತಿಲ್ಲ. ಅಕ್ರಮಗಳಿಂದ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನ್ಯಾಯವಾಗುತ್ತಿದೆ. ಕೂಡಲೇ ನೀಟ್ ಪರೀಕ್ಷೆಯನ್ನು ರದ್ದು

## ಅರಣ್ಯ ಭೂಮಿಗೆ ಬೇಲಿ ಹಾಕಿ: ಖಂಡ್ರೆ ಸೂಚನೆ



**ಬೆಂಗಳೂರು, ಮೇ 21:** ಕಾಂಪಾ ನಿಧಿಯಲ್ಲಿ ಅರಣ್ಯ ಭೂಮಿ ರಕ್ಷಣೆಗೆ ಹಣ ಒದಗಿಸಲು ಅವಕಾಶವಿದ್ದು, ನಗರ ಮತ್ತು ಪಟ್ಟಣದ ಸಮೀಪ ಇರುವ ಕೋಟ್ಯಂತರ ರೂ. ಬೆಲೆ ಬಾಳುವ ಅರಣ್ಯ ಭೂಮಿ ಒತ್ತುವರಿ ಆಗದಂತೆ ಬೇಲಿ ಹಾಕಲು ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವ ಅರಣ್ಯಾಧಿಕಾರಿಗಳಿಗೆ ಸೂಚಿಸಿದ್ದಾರೆ.

ಬೆಂಗಳೂರಿನಲ್ಲಿ ಉನ್ನತಾಧಿಕಾರಿಗಳೊಂದಿಗೆ ಸಭೆ ನಡೆಸಿದ ಅವರು, ಇತ್ತೀಚೆಗೆ ತಾವು ಹಾಸನ ನಗರಕ್ಕೆ ಹೊಂದಿಕೊಂಡಿರುವ ಮಡೆನೂರು ಅರಣ್ಯ ಪ್ರದೇಶಕ್ಕೆ ಭೇಟಿ ನೀಡಿದ್ದು, ಇಲಾಖೆ ಹೆಸರಲ್ಲಿ ಆರ್.ಟಿ.ಸಿ. ಇದ್ದರೂ ಅಲ್ಲಿ ಅರಣ್ಯ ಬೆಳೆಸಿಲ್ಲ. ಹೀಗಾಗಿ ಒತ್ತುವರಿ ನಡೆಯುತ್ತದೆ. ಕೂಡಲೇ ಇಂತಹ ಭೂಮಿ ಗುರುತಿಸಿ ಬೇಲಿಹಾಕಿ, ಸ್ಥಳೀಯ ಪ್ರಭೇದದ ಸಸಿಗಳನ್ನು ನೆಟ್ಟು ನೆಡುತೋಪು ಅಭಿವೃದ್ಧಿಪಡಿಸಿ ಎಂದು ಸೂಚಿಸಿದರು.

ಅರಣ್ಯ ಭೂಮಿಯ ಇಂಡೀಕರಣಕ್ಕೆ ಸೂಚನೆ: ಸರ್ಕಾರದಿಂದ ಮತ್ತು ಹಿಂದೆ ರಾಜರ ಆಳ್ವಿಕೆ ಕಾಲದಲ್ಲಿ ಅರಣ್ಯ ಎಂದು

# ಕುಡಿಯುವ ನೀರಿಗಾಗಿ ಮಾನ್ವಿ ಜನರ ಪರದಾಟ

## ಪುರಸಭೆ–ಅಮೃತ್–2 ಅಧಿಕಾರಿಗಳ ನಿರ್ಲಕ್ಷ್ಯಕ್ಕೆ ವೆಲ್ಫೇರ್ ಪಾರ್ಟಿ ಆಕ್ರೋಶ; ಸಮಸ್ಯೆ ಬಗೆಹರಿಸದಿದ್ದರೆ ಉಗ್ರ ಹೋರಾಟ ಎಚ್ಚರಿಕೆ

ಧೈರ್ಯದ ದಾರಿ



**ಮಾನ್ವಿ, ಮೇ 21 :**ನಗರದಲ್ಲಿ ದಿನದಿಂದ ದಿನಕ್ಕೆ ತೀವ್ರಗೊಳ್ಳುತ್ತಿರುವ ಕುಡಿಯುವ ನೀರಿನ ಸಮಸ್ಯೆಯಿಂದ ಸಾರ್ವಜನಿಕರು ಸಂಕಷ್ಟಕ್ಕೆ ಸಿಲುಕಿದ್ದು, ಪುರಸಭೆ ಆಡಳಿತ ಹಾಗೂ ಅಮೃತ್–2 ಪೈಪ್‌ಲೈನ್ ಕಾಮಗಾರಿ ನಡೆಸುತ್ತಿರುವ ಕೆಡಬ್ಲ್ಯೂಎಸ್ ಅಧಿಕಾರಿಗಳ ನಿರ್ಲಕ್ಷ್ಯವೇ ಇದಕ್ಕೆ ಪ್ರಮುಖ ಕಾರಣ ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಆರೋಪಿಸಿದೆ.

ನಗರದ ವಿವಿಧ ಭಾಗಗಳಲ್ಲಿ ಅಮೃತ್–2 ಯೋಜನೆಯಡಿ ಪೈಪ್‌ಲೈನ್ ಕಾಮಗಾರಿಗಳು ನಡೆಯುತ್ತಿದ್ದು, ರಸ್ತೆಗಳನ್ನು ಅಗೆದು ಸಾರ್ವಜನಿಕರ ಸಂಚಾರಕ್ಕೆ ತೊಂದರೆ ಉಂಟುಮಾಡಲಾಗಿದೆ. ಮತ್ತೊಂದೆಡೆ ಕುಡಿಯುವ ನೀರಿನ ಸರಬರಾಜು ಸಂಪೂರ್ಣ ಅಸ್ತವ್ಯಸ್ತಗೊಂಡಿದ್ದು, ನಾಲ್ಕು ರಿಂದ ಏಳು ದಿನಕ್ಕೊಮ್ಮೆ ಮಾತ್ರ ನೀರು ಪೂರೈಕೆ ಆಗುತ್ತಿರುವುದರಿಂದ ಜನರು ನೀರಿಗಾಗಿ ಪರದಾಡುವ ಸ್ಥಿತಿ ನಿರ್ಮಾಣವಾಗಿದೆ ಎಂದು ಪಕ್ಷದ ಮುಖಂಡರು ದೂರಿದ್ದಾರೆ.

ಪುರಸಭೆಯ ಸಿಬ್ಬಂದಿಗಳು ಹಾಗೂ ಅಮೃತ್–2 ಕಾಮಗಾರಿ ನಿರ್ವಹಿಸುತ್ತಿರುವ ಅಧಿಕಾರಿಗಳ ನಡುವೆ ಸಮನ್ವಯದ ಕೊರತೆಯಿದ್ದು, ಜನರ ಸಮಸ್ಯೆಗಳಿಗೆ ಸ್ಪಂದಿಸುವಲ್ಲಿ ಅಧಿಕಾರಿಗಳು ವಿಫಲರಾಗಿದ್ದಾರೆ. ಪುರಸಭೆಯ ಮುಖ್ಯಾಧಿಕಾರಿಗಳು ಕಚೇರಿಯಲ್ಲೇ ಸೀಮಿತಗೊಂಡು ಸಾರ್ವಜನಿಕರ ತೊಂದರೆಗಳ ಬಗ್ಗೆ ಗಮನ ಹರಿಸುತ್ತಿಲ್ಲ ಎಂದು ಆಕ್ರೋಶ ವ್ಯಕ್ತಪಡಿಸಲಾಗಿದೆ.

ಅಮೃತ್–2 ಯೋಜನೆ ಹೆಸರಿನಲ್ಲಿ ಕೋಟ್ಯಾಂತರ ರೂಪಾಯಿ ವೆಚ್ಚ ಮಾಡಲಾಗುತ್ತಿದ್ದರೂ, ಜನರಿಗೆ ಧೂಳು, ಕೆಸರು ಹಾಗೂ ನೀರಿನ ಅಭಾವವೇ ಸಿಗುತ್ತಿದೆ. ಕಾಮಗಾರಿ ಆರಂಭಿಸುವ ಮೊದಲು ಪರ್ಯಾಯ ನೀರಿನ ವ್ಯವಸ್ಥೆ ಕಲ್ಪಿಸಬೇಕಾದ ಕನಿಷ್ಠ ಜವಾಬ್ದಾರಿಯನ್ನೂ ಅಧಿಕಾರಿಗಳು ಪಾಲಿಸಿಲ್ಲ ಎಂದು ಆರೋಪಿಸಲಾಗಿದೆ.

ಜನರ ಮೂಲಭೂತ ಹಕ್ಕಾದ ಕುಡಿಯುವ ನೀರನ್ನು ಸಮರ್ಪಕವಾಗಿ ಒದಗಿಸಲು ವಿಫಲವಾಗಿರುವ ಸಂಬಂಧಪಟ್ಟ ಅಧಿಕಾರಿಗಳ ವಿರುದ್ಧ ತಕ್ಷಣ ಕ್ರಮ ಕೈಗೊಳ್ಳಬೇಕು. ನಗರಕ್ಕೆ ಪ್ರತಿದಿನ ಅಥವಾ ನಿಗದಿತ ಅವಧಿಯಲ್ಲಿ ನೀರು ಪೂರೈಕೆ ಆಗುವಂತೆ ತುರ್ತು ಕ್ರಮ ಕೈಗೊಳ್ಳಬೇಕು ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ಒತ್ತಾಯಿಸಿದೆ.

ಇನ್ನೂ ಅಧಿಕಾರಿಗಳು ನಿರ್ಲಕ್ಷ್ಯ ಧೋರಣೆ ಮುಂದುವರಿಸಿದರೆ ಸಾರ್ವಜನಿಕರನ್ನು ಒಳಗೊಂಡು ಉಗ್ರ ಹೋರಾಟ ನಡೆಸಲಾಗುವುದು ಎಂದು ವೆಲ್ಫೇರ್ ಪಾರ್ಟಿ ಆಫ್ ಇಂಡಿಯಾ ತಾಲೂಕು ಅಧ್ಯಕ್ಷ ಶೇಕ್ ಬಾಬಾ ಹುಸೇನ್ ಗಚ್ಚಿ ಎಚ್ಚರಿಸಿದ್ದಾರೆ.

# ರಾಷ್ಟ್ರೀಯ ಭಯೋತ್ಪಾದನಾ ವಿರೋಧಿ ದಿನ ಆಚರಣೆ

ಧೈರ್ಯದ ದಾರಿ

**ರಾಯಚೂರು ಮೇ.21:** ರಾಷ್ಟ್ರೀಯ ಭಯೋತ್ಪಾದನಾ ವಿರೋಧಿ ದಿನದ ಅಂಗವಾಗಿ ಮೇ.21ರ ಗುರುವಾರ ದಂದು ರಾಯಚೂರು ನಗರದ ಜಿಲ್ಲಾ ಪಂಚಾಯತಿ ಕಚೇರಿಯ ಆವರಣದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರ ನೇತೃತ್ವದಲ್ಲಿ ಪ್ರತಿಜ್ಞಾ ವಿಧಿಯನ್ನು ಭೋದಿಸುವ ಮೂಲಕ ಆಚರಣೆ ಮಾಡಲಾಯಿತು.

ಪ್ರತಿ ವರ್ಷ ಮೇ 21ನೇ ದಿನಾಂಕದಂದು ಭಯೋತ್ಪಾದನಾ ವಿರೋಧಿ ದಿನವನ್ನಾಗಿ ಆಚರಿಸಲಾಗುತ್ತಿದೆ. ಅದರಂತೆ ಈ ವರ್ಷವೂ ಭಯೋತ್ಪಾದನಾ ವಿರೋಧಿ ದಿನವನ್ನು ಆಚರಿಸಲು ಉದ್ದೇಶಿಸಲಾಗಿದೆ ಎಂದರು.

ಭಯೋತ್ಪಾದನೆ ಮಟ್ಟಹಾಕಲು ಎಲ್ಲರ ಸಹಕಾರ ಅಗತ್ಯ. ಸ್ವಾರ್ಥ ಬಿಟ್ಟು ರಾಜ್ಯ ಹಾಗೂ ದೇಶದ ಹಿತ ದೃಷ್ಟಿಯಿಂದ ಭಯೋತ್ಪಾದನೆ ವಿರುದ್ಧ ಎಚ್ಚೆತ್ತುಕೊಳ್ಳಬೇಕಿದೆ ಎಂದರು.

ಭಯೋತ್ಪಾದನಾ ಕೃತ್ಯಗಳ ವಿರುದ್ಧ ಜಾಗೃತರಾಗದಿದ್ದಲ್ಲಿ ಸಮಾಜಘಾತಕ ಶಕ್ತಿಗಳು ಹಾಗೂ ಭಯೋತ್ಪಾದಕರು ಅಮಾನುಷ ಕೃತ್ಯಗಳನ್ನು ಮುಂದುವರೆಸುವರು. ಇದರಿಂದ ಅಮಾಯಕರು ಜೀವ ಕಳೆದುಕೊಳ್ಳುವ ಜೊತೆಗೆ ದೇಶದ 2ನೇಪುಟಕ್ಕೆ





# ಬೆಳ್ಳಂಬೆಳಗ್ಗೆ ಗರ್ಜಿಸಿದ ಜೆಸಿಬಿಗಳು : ಬೀದಿಬದಿ ಡಬ್ಬಾ ಅಂಗಡಿಗಳ ತೆರವು

## ಜೀವನೋಪಾಯ ಕಳೆದುಕೊಂಡ ಸಣ್ಣ ವ್ಯಾಪಾರಿಗಳ ಆಕ್ರೋಶ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕೆಂದು ಆಗ್ರಹ




ಧೈರ್ಯದ ದಾರಿ

**ಲಿಂಗಸುಗೂರು :** ಪಟ್ಟಣದ ಪ್ರಮುಖ ರಸ್ತೆ, ಸರ್ಕಾರಿ ಕಚೇರಿಗಳ ಸುತ್ತಮುತ್ತ ಹಾಗೂ ಸಾರ್ವಜನಿಕ ಸಂಚಾರಕ್ಕೆ ಅಡ್ಡಿಯಾಗುತ್ತಿದೆ ಎಂಬ ಕಾರಣ ನೀಡಿ ಅಕ್ರಮವಾಗಿ ನಿರ್ಮಾಣವಾಗಿದ್ದ ಬೀದಿಬದಿ ಡಬ್ಬಾ ಅಂಗಡಿಗಳನ್ನು ತಾಲೂಕು ಆಡಳಿತವು ಗುರುವಾರ ಬೆಳ್ಳಂಬೆಳಗ್ಗೆ ಜೆಸಿಬಿಗಳ ಮೂಲಕ ತೆರವುಗೊಳಿಸಿತು. ಮುಂಜಾನೆ ಆರಂಭವಾದ ಈ ಕಾರ್ಯಾಚರಣೆಯಿಂದ ಪಟ್ಟಣದಲ್ಲಿ ಕೆಲಕಾಲ ಉದ್ವಿಗ್ನ ವಾತಾವರಣ ನಿರ್ಮಾಣವಾಗಿದ್ದು, ಸಣ್ಣ ವ್ಯಾಪಾರಿಗಳು ಆತಂಕಕ್ಕೊಳಗಾದ ಘಟನೆ ನಡೆಯಿತು.

ತಾಲೂಕು ಆಡಳಿತ, ಪುರಸಭೆ ಹಾಗೂ ಪೊಲೀಸ್ ಇಲಾಖೆಯ ಅಧಿಕಾರಿಗಳ ಸಮ್ಮುಖದಲ್ಲಿ ಬೆಳಗಿನ ಜಾವವೇ ಕಾರ್ಯಾಚರಣೆ ಆರಂಭಗೊಂಡಿತು. ಪ್ರಮುಖ ರಸ್ತೆ ಬದಿಗಳು, ಸರ್ಕಾರಿ ಕಚೇರಿಗಳ ಮುಂಭಾಗ, ಪಾದಚಾರಿ ಮಾರ್ಗಗಳು ಹಾಗೂ ಸಾರ್ವಜನಿಕ ಸ್ಥಳಗಳಲ್ಲಿ ಹಲವು ವರ್ಷಗಳಿಂದ ವ್ಯಾಪಾರ ನಡೆಸುತ್ತಿದ್ದ ಸಣ್ಣ ಡಬ್ಬಾ ಅಂಗಡಿಗಳನ್ನು ಜೆಸಿಬಿಗಳ ಮೂಲಕ ತೆರವುಗೊಳಿಸಲಾಯಿತು. ಕಾರ್ಯಾಚರಣೆಗೆ ಮುನ್ನವೇ ಪೊಲೀಸರು ಭದ್ರತೆ ಒದಗಿಸಿದ್ದರಿಂದ ಯಾವುದೇ ಅಹಿತಕರ ಘಟನೆ ಸಂಭವಿಸಲಿಲ್ಲ.

ಜೆಸಿಬಿಗಳು ಒಂದರ ಹಿಂದೆ ಒಂದರಂತೆ ಅಂಗಡಿಗಳನ್ನು ನೆಲಸಮ ಮಾಡುತ್ತಿದ್ದ ದೃಶ್ಯ ಕಂಡು ಅನೇಕ ವ್ಯಾಪಾರಿಗಳು ಕಣ್ಣೀರಿಟ್ಟರು. ಕೆಲವರು ತಮ್ಮ ಅಂಗಡಿಗಳಲ್ಲಿದ್ದ ಸಾಮಗ್ರಿಗಳನ್ನು ತುರ್ತುಗತಿಯಲ್ಲಿ ತೆರವುಗೊಳಿಸಲು ಮುಂದಾದರೆ, ಇನ್ನೂ ಕೆಲವರು ಅಧಿಕಾರಿಗಳ ಬಳಿ ಸಮಯಾವಕಾಶ ನೀಡುವಂತೆ ಮನವಿ ಮಾಡಿದರು. ಆದರೆ ಅಧಿಕಾರಿಗಳು ಈಗಾಗಲೇ ಹಲವು ಬಾರಿ ನೋಟಿಸ್ ನೀಡಲಾಗಿದೆ ಎಂದು ತಿಳಿಸಿ ಕಾರ್ಯಾಚರಣೆ ಮುಂದುವರಿಸಿದರು.

“ನಾವು ಬಡವರು. ಕುಟುಂಬ ನಿರ್ವಹಣೆಗೆ ಈ ಸಣ್ಣ ಅಂಗಡಿಗಳೇ ಆಧಾರ. ಬೆಳಗ್ಗೆಯೇ ಬಂದು ಅಂಗಡಿಗಳನ್ನು ತೆರವು ಮಾಡಿದರೆ ನಾವು ಬದುಕುವುದು ಹೇಗೆ? ಮಕ್ಕಳ ವಿದ್ಯಾಭ್ಯಾಸ, ಮನೆ ಬಾಡಿಗೆ, ದಿನನಿತ್ಯದ ಖರ್ಚು ಎಲ್ಲವೂ ಈ ವ್ಯಾಪಾರದಿಂದಲೇ ನಡೆಯುತ್ತಿತ್ತು” ಎಂದು ವ್ಯಾಪಾರಿಯೊಬ್ಬರು ಕಣ್ಣೀರಿನಿಂದ ಅಳಲು ತೋಡಿಕೊಂಡರು. 2ನೇಪುಟಕ್ಕೆ

# ರಾಯಚೂರು ವಿಮಾನ ನಿಲ್ದಾಣ ಕಾಮಗಾರಿ ಸ್ಥಳಕ್ಕೆ ಜಿಲ್ಲಾಧಿಕಾರಿ ಪೂವಿತಾ ಎಸ್. ಭೇಟಿ: ಪರಿಶೀಲನೆ



ಧೈರ್ಯದ ದಾರಿ

**ರಾಯಚೂರು ಮೇ.21 :** ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ಮೇ.20ರ ಸಂಜೆ 4ಗಂಟೆಗೆ ರಾಯಚೂರು ನಗರದ ಹೊರ ವಲಯದ ಯರಮರಸ್ ಬಳಿಯಲ್ಲಿ ನಿರ್ಮಾಣ ಹಂತದಲ್ಲಿರುವ ವಿಮಾನ ನಿಲ್ದಾಣದ ಕಾಮಗಾರಿ ಸ್ಥಳಕ್ಕೆ ಭೇಟಿ ನೀಡಿ ಕಾಮಗಾರಿ ಪ್ರಗತಿಯ ಬಗ್ಗೆ ಸಮಗ್ರ ಪರಿಶೀಲನೆ ನಡೆಸಿದರು.

ಜಿಲ್ಲಾಧಿಕಾರಿಗಳು, ಮೊದಲಿಗೆ ವಿಮಾನ ನಿಲ್ದಾಣದ ರನ್ ವೇ ಕಾಮಗಾರಿಯ ವೀಕ್ಷಣೆ ನಡೆಸಿ ಕಾಮಗಾರಿಯ ಪ್ರಗತಿಯ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು. ಒಟ್ಟು 1.7 ಕಿ ಮೀ ಉದ್ದದ ರನ್ ವೇ ಪೈಕಿ ಇದುವರೆಗೆ 850 ಮೀಟರ್‌ನಷ್ಟು ರನ್ ವೆಗೆ ಮರಂ ಹಾಕಿದ್ದು, ಬಾಕಿ ಕಾಮಗಾರಿ ಪ್ರಗತಿ ಹಂತದಲ್ಲಿದೆ ಎಂದು ಅಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು.

ಬಳಿಕ ಜಿಲ್ಲಾಧಿಕಾರಿಗಳು ಪ್ಯಾಸೆಂಜರ್ ಟರ್ಮಿನಲ್ ಬಿಲ್ಡಿಂಗ್‌ಗೆ ಭೇಟಿ ನೀಡಿ ಪರಿಶೀಲಿಸಿದರು. ಈ ಕಟ್ಟಡಕ್ಕೆ ಈಗಾಗಲೇ ಕಾಲಂ ಮತ್ತು ಚೆತ್ ಹಾಕಿದ್ದು, ಈಗ ರೂಫ್ ಟ್ರಸ್ ಕಾಮಗಾರಿ ಕೈಗೊಳ್ಳಲಾಗುತ್ತಿದೆ ಎಂದು ಅಧಿಕಾರಿಗಳು ತಿಳಿಸಿದರು.

ಇದೆ ವೇಳೆ ಎಲೆಕ್ಟ್ರಿಕಲ್ ಸಬ್ ಸ್ಟೇಷನ್ ಬಿಲ್ಡಿಂಗ್–1 ಮತ್ತು ಬಿಲ್ಡಿಂಗ್ 2ರ ಕಾಮಗಾರಿಗಳ ಬಗ್ಗೆ ಸಹ ಜಿಲ್ಲಾಧಿಕಾರಿಗಳು ಪರಿಶೀಲಿಸಿದರು.

ಒಟ್ಟು 12 ಸೆಕ್ಯುರಿಟಿ ವಾಚ್ ಟವರ್ ಪೈಕಿ ಇದೀಗ 8 ಟವರ್‌ಗಳ ನಿರ್ಮಾಣ ಕಾರ್ಯವು ಪ್ರಗತಿಯಲ್ಲಿದೆ. ವಿಮಾನ ನಿಲ್ದಾಣದ ಕಾಂಪೌಂಡ್ ಒಳಭಾಗದಲ್ಲಿನ ಆಂತರಿಕ ರಸ್ತೆಗಳ ನಿರ್ಮಾಣ ಕಾಮಗಾರಿಯು ಸಹ ಪ್ರಗತಿಯಲ್ಲಿದೆ. ವಿಮಾನ ನಿಲ್ದಾಣದ ಒಟ್ಟು 8 ಕಿ.ಮೀಟರ್ ಕಾಂಪೌಂಡ್ ನಿರ್ಮಾಣ ಕಾರ್ಯವು ಈಗಾಗಲೇ ಪೂರ್ಣಗೊಂಡಿದೆ ಎಂದು ಅಧಿಕಾರಿಗಳು ಮತ್ತು ಗುತ್ತಿಗೆದಾರರು ಜಿಲ್ಲಾಧಿಕಾರಿಗಳಿಗೆ ಮಾಹಿತಿ ನೀಡಿದರು.

ವೇಗ ನೀಡಲು ಸೂಚನೆ: ವಿಮಾನ ನಿಲ್ದಾಣ ಕಾಮಗಾರಿಯನ್ನು ವೇಗಗೊಳಿಸಿ, ಬಾಕಿ ಉಳಿಸಿದ ಎಲ್ಲ ಕಾರ್ಯಗಳನ್ನು ಕಾಲಮಿತಿಯೊಳಗೆ ಪೂರ್ಣಗೊಳಿಸಬೇಕು ಎಂದು ಇದೆ ವೇಳೆ ಜಿಲ್ಲಾಧಿಕಾರಿಗಳು, ಸಂಬಂಧಿಸಿದ ಗುತ್ತಿಗೆದಾರರು ಮತ್ತು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ನಿರ್ದೇಶನ ನೀಡಿದರು.

**ಲೇಔಟ್ ಕಾಮಗಾರಿಗಳ ವೀಕ್ಷಣೆ:** ರಾಯಚೂರು2ನೇಪುಟಕ್ಕೆ

ಮೊದಲನೇ ಪುಟದಿಂದ

# ರಾಯಚೂರು ವಿಮಾನ ನಿಲ್ದಾಣ ಕಾಮಗಾರಿ ಸ್ಥಳಕ್ಕೆ ಜಿಲ್ಲಾಧಿಕಾರಿ ಪೂವಿತಾ ಎಸ್. ಭೇಟಿ: ಪರಿಶೀಲನೆ

ಹೊರ ವಲಯದ ದಂಡ್ ಗ್ರಾಮದ 108 ಹಾಗೂ ಏಗನೂರು ಗ್ರಾಮದ 30 ಮನೆಗಳ ಹಸ್ತಾಂತರ ಹಿನ್ನಲೆಯಲ್ಲಿ ನೂತನವಾಗಿ ನಿರ್ಮಾಣವಾಗುತ್ತಿರುವ ಲೇಔಟ್‌ಗಳಿಗೆ ಬುಧವಾರ ಜಿಲ್ಲಾಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ಮಾಡಿದರು.

ಲೇಔಟ್‌ಗಳಲ್ಲಿ ಇರಬೇಕಾದ ಎಲ್ಲ ಮೂಲಭೂತ ಸೌಕರ್ಯಗಳನ್ನು ಅಚ್ಚುಕಟ್ಟಾಗಿ ಇರಬೇಕು. ಲೇಔಟ್ ಕಾಮಗಾರಿಯು ನಿಗದಿತ ಸಮಯದಲ್ಲಿ ಗುಣಮಟ್ಟದಿಂದ ಪೂರ್ಣಗೊಳಿಸಬೇಕೆಂದು ಸಂಬಂಧಿಸಿದ ಇಲಾಖೆಯ ಅಧಿಕಾರಿಗಳಿಗೆ ಜಿಲ್ಲಾಧಿಕಾರಿಗಳಾದ ಪೂವಿತಾ ಎಸ್. ಅವರು ನಿರ್ದೇಶನ ನೀಡಿದರು.

ಇದೇ ಸಂದರ್ಭದಲ್ಲಿ ಲೋಕೋಪಯೋಗಿ ಇಲಾಖೆಯ ಕಾರ್ಯಪಾಲಕ ಅಭಿಯಂತರರಾದ ವೆಂಕಟೇಶ ಗಲಗ, ಸಹಾಯಕ ಅಭಿಯಂತರರಾದ ಮಹೇಶ್, ಗುತ್ತಿಗೆದಾರ ಕಂಪನಿ ಕೆಎಂವಿದ ಪ್ರತಿನಿಧಿಗಳಾದ ಪ್ರವೀಣ್ ಹಾಗೂ ಇನ್ನಿತರರು ಇದ್ದರು.

# ರಾಷ್ಟ್ರೀಯ ಭಯೋತ್ಪಾದನಾ ವಿರೋಧಿ ದಿನ ಆಚರಣೆ

ಅಭಿವೃದ್ಧಿ ಕುಂಟಿತಗೊಳ್ಳುವುದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಾದ ಈಶ್ವರ್ ಕುಮಾರ್ ಕಾಂದೂ ಅವರು ಹೇಳಿದರು.

ಇದೇ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಉಪಕಾರ್ಯದರ್ಶಿ ಹಾಲಸಿದ್ದಪ್ಪ ಪೂಜೇರಿ, ಯೋಜನಾ ನಿರ್ದೇಶಕ ಶರಣಬಸವರಾಜ ಕೆ, ಮುಖ್ಯ ಯೋಜನಾಧಿಕಾರಿ ಡಾ.ಟಿ.ರೋಣಿ, ಮುಖ್ಯ ಲೆಕ್ಕಾಧಿಕಾರಿ ವಿಜಯ ಶಂಕರ ಸೇರಿದಂತೆ ಕಚೇರಿಯ ಸಿಬ್ಬಂದಿಗಳು ಇದ್ದರು.

## ಬೆಳ್ಳಂಬೆಳಗ್ಗೆ ಗರ್ಜಿಸಿದ ಜೆಸಿಬಿಗಳು : ಬೀದಿಬದಿ ಡಬ್ಬಾ ಅಂಗಡಿಗಳ ತೆರವು

# ಜೀವನೋಪಾಯ ಕಳೆದುಕೊಂಡ ಸಣ್ಣ ವ್ಯಾಪಾರಿಗಳ ಆಕ್ರೋಶ ಪರ್ಯಾಯ ವ್ಯವಸ್ಥೆ ಕಲ್ಪಿಸಬೇಕೆಂದು ಆಗ್ರಹ

ಕೆಲ ವ್ಯಾಪಾರಿಗಳು ತಮ್ಮ ಬಳಿ ಇರುವ ದಾಖಲೆಗಳು ಹಾಗೂ ಪುರಸಭೆ ತೆರಿಗೆ ಪಾವತಿ ರಸೀದಿಗಳನ್ನು ತೋರಿಸಲು ಯತ್ನಿಸಿದರೂ ಅಧಿಕಾರಿಗಳು ಯಾವುದೇ ಅವಕಾಶ ನೀಡಲಿಲ್ಲ ಎಂದು ಆರೋಪಿಸಿದರು. "ನಮ್ಮ ಮಾತನ್ನೇ ಕೇಳದೆ ಜೆಸಿಬಿ ಹಾಯಿಸಿದರು. ಕನಿಷ್ಠ ಪರ್ಯಾಯ ಸ್ಥಳವನ್ನಾದರೂ ತೋರಿಸಬೇಕಿತ್ತು" ಎಂದು ವ್ಯಾಪಾರಿಗಳು ಆಕ್ರೋಶ ವ್ಯಕ್ತಪಡಿಸಿದರು. ಅಧಿಕಾರಿಗಳ ಪ್ರಕಾರ, ಪಟ್ಟಣದಲ್ಲಿ ರಸ್ತೆ ವಿಸ್ತರಣೆ ಕಾಮಗಾರಿ, ಸಾರ್ವಜನಿಕ ಸಂಚಾರ ಸುಗಮಗೊಳಿಸುವುದು ಹಾಗೂ ಪಾದಚಾರಿ ಮಾರ್ಗಗಳ ಅತಿಕ್ರಮಣ ತೆರವುಗೊಳಿಸಿ ಪಟ್ಟಣ ಸುಂದರೀಕರಣ ಮಾಡುವ ಉದ್ದೇಶದಿಂದ ಈ ಕ್ರಮ ಕೈಗೊಳ್ಳಲಾಗಿದೆ. "ಹಲವು ಬಾರಿ ನೋಟಿಸ್ ನೀಡಿದ್ದರೂ ಅತಿಕ್ರಮಣ ತೆರವುಗೊಳಿಸದ ಹಿನ್ನೆಲೆಯಲ್ಲಿ ಅನಿವಾರ್ಯವಾಗಿ ಕಾರ್ಯಾಚರಣೆ ನಡೆಸಲಾಗಿದೆ" ಎಂದು ಅಧಿಕಾರಿಗಳು ಸ್ಪಷ್ಟಪಡಿಸಿದರು.

ಆದರೆ ಈ ಕ್ರಮಕ್ಕೆ ವ್ಯಾಪಾರಿಗಳು ಹಾಗೂ ಸಾರ್ವಜನಿಕರಿಂದ ತೀವ್ರ ವಿರೋಧ ವ್ಯಕ್ತವಾಯಿತು. "ಪಟ್ಟಣದಲ್ಲಿ ದೊಡ್ಡ ಮಟ್ಟದ ಅತಿಕ್ರಮಣಗಳ ವಿರುದ್ಧ ಯಾವುದೇ ಕ್ರಮ ಕೈಗೊಳ್ಳದ ಅಧಿಕಾರಿಗಳು ಬಡವರ ಜೀವನೋಪಾಯದ ಮೇಲೆ ಮಾತ್ರ ಕತ್ತರಿ ಹಾಕುತ್ತಿದ್ದಾರೆ" ಎಂದು ವ್ಯಾಪಾರಿಗಳು ಆರೋಪಿಸಿದರು.

ಇದಲ್ಲದೆ ಪಟ್ಟಣದಲ್ಲಿ ಮಳೆ ನೀರು ನಿಂತಿರುವ ಸಮಸ್ಯೆ, ಕಸದ ನಿರ್ವಹಣೆ, ಕುಡಿಯುವ ನೀರಿನ ತೊಂದರೆ ಸೇರಿದಂತೆ ಅನೇಕ ಮೂಲಭೂತ ಸಮಸ್ಯೆಗಳನ್ನು ಬಗೆಹರಿಸಲು ವಿಫಲವಾಗಿರುವ ಆಡಳಿತ ಈಗ ಸಣ್ಣ ವ್ಯಾಪಾರಿಗಳ ಮೇಲೆ ಮಾತ್ರ ಕಠಿಣ ಕ್ರಮ ಕೈಗೊಂಡಿರುವುದು ಸರಿಯಲ್ಲ ಎಂದು ಸಾರ್ವಜನಿಕರು ಟೀಕಿಸಿದರು.

ಕಾರ್ಯಾಚರಣೆಯಿಂದ ಹಲವಾರು ಕುಟುಂಬಗಳು ಏಕಾಏಕಿ ಉದ್ಯೋಗ ಕಳೆದುಕೊಳ್ಳುವ ಸ್ಥಿತಿ ಎದುರಿಸಿದೆ. ದಿನಗೂಲಿ ಆಧಾರದಲ್ಲಿ ಬದುಕುತ್ತಿರುವ ಅನೇಕ ಕುಟುಂಬಗಳಿಗೆ ಇದು ದೊಡ್ಡ ಹೊಡೆತವಾಗಿದೆ. "ಪರ್ಯಾಯ ವ್ಯವಸ್ಥೆ ಕಲ್ಪಿಸದೇ ತೆರವುಗೊಳಿಸಿರುವುದು ಮಾನವೀಯತೆಯಿಲ್ಲದ ಕ್ರಮ. ವ್ಯಾಪಾರಿಗಳಿಗೆ ಪ್ರತ್ಯೇಕ ಸ್ಥಳ ಗುರುತಿಸಿ ಪುನರ್ವಸತಿ ಕಲ್ಪಿಸಬೇಕು" ಎಂದು ವಿವಿಧ ಸಂಘಟನೆಗಳು ಆಗ್ರಹಿಸಿವೆ.

ಕಾರ್ಯಾಚರಣೆ ವೇಳೆ ಕೆಲಕಾಲ ವ್ಯಾಪಾರಿಗಳು ಹಾಗೂ ಅಧಿಕಾರಿಗಳ ನಡುವೆ ವಾಗ್ವಾದವೂ ನಡೆಯಿತು. ಪರಿಸ್ಥಿತಿ ನಿಯಂತ್ರಣಕ್ಕೆ ಪೊಲೀಸರು ಮಧ್ಯಪ್ರವೇಶಿಸಿ ವ್ಯಾಪಾರಿಗಳನ್ನು ಸಮಾಧಾನಪಡಿಸಿದರು. ಪಟ್ಟಣದಲ್ಲಿ ಇನ್ನೂ ಹಲವು ಅತಿಕ್ರಮಣಗಳ ವಿರುದ್ಧ ಮುಂದಿನ ದಿನಗಳಲ್ಲಿ ಕ್ರಮ ಕೈಗೊಳ್ಳುವ ಸಾಧ್ಯತೆ ಇದೆ ಎನ್ನಲಾಗುತ್ತಿದೆ.

ಒಟ್ಟಾರೆ, ಪಟ್ಟಣ ಸುಂದರೀಕರಣ ಮತ್ತು ರಸ್ತೆ ಸಂಚಾರ ಸುಗಮಗೊಳಿಸುವ ಹೆಸರಿನಲ್ಲಿ ನಡೆದ ಈ ಕಾರ್ಯಾಚರಣೆ ಸಣ್ಣ ವ್ಯಾಪಾರಿಗಳ ಬದುಕಿನ ಮೇಲೆ ದೊಡ್ಡ ಪರಿಣಾಮ ಬೀರಿದ್ದು, ಪರ್ಯಾಯ ವ್ಯವಸ್ಥೆ ಕಲ್ಪಿಸುವಂತೆ ವ್ಯಾಪಾರಿಗಳು ಸರ್ಕಾರ ಹಾಗೂ ತಾಲೂಕು ಆಡಳಿತವನ್ನು ಒತ್ತಾಯಿಸಿದ್ದಾರೆ.

# ಅರಣ್ಯ ಭೂಮಿಗೆ ಬೇಲಿ ಹಾಕಿ: ಖಂಡ್ರೆ ಸೂಚನೆ

ಗೆಜೆಟ್ ಅಧಿಸೂಚನೆ ಆಗಿದ್ದರೂ ಅರಣ್ಯ ಸ್ವರೂಪವಿದ್ದರೂ ಇನ್ನೂ ಕೆಲವು ಕಡೆ ಅರಣ್ಯ ಎಂದು ಇಂಡೀಕರಣ ಆಗದೆ, ಆರ್.ಟಿ.ಸಿ.ಯಲ್ಲಿ ಅರಣ್ಯ ಎಂದು ದಾಖಲಾಗದ ಕಾರಣ ಅಕ್ರಮ ಮಂಜೂರಾತಿ, ಒತ್ತುವರಿ ಆಗುತ್ತಿದ್ದು, ಕೂಡಲೇ ಇಂಡೀಕರಣಕ್ಕೆ (ಮ್ಯುಟೇಷನ್) ಕ್ರಮ ವಹಿಸುವಂತೆ ಈಶ್ವರ ಖಂಡ್ರೆ ನಿರ್ದೇಶನ ನೀಡಿದರು.

ತುಮಕೂರಿಗೆ ಪ್ರತ್ಯೇಕ ಚಿರತೆ ಕಾರ್ಯಪಡೆ: ತುಮಕೂರು ಜಿಲ್ಲೆಯಲ್ಲಿ ಊರಿನತ್ತ ಚಿರತೆಗಳು ಬರುವುದು ಹೆಚ್ಚಾಗಿದ್ದು, ಚಿರತೆಗಳನ್ನು ಹಿಡಿದು ಕಾಡಿಗೆ ಮರಳಿಸಲು ಅಥವಾ ಪುನರ್ವಸತಿ ಕೇಂದ್ರಗಳಿಗೆ ಸ್ಥಳಾಂತರಿಸಲು ಚಿರತೆ ಕಾರ್ಯಪಡೆ ರಚನೆಗೆ ಕೂಡಲೆ ಪ್ರಕ್ರಿಯೆ ಆರಂಭಿಸುವಂತೆ ತಿಳಿಸಿದರು.

ಚಿರತೆಗಳು ನಾಡಿಗೆ ಬಂದಾಗ ಜನರು ಭಯಭೀತರಾಗುತ್ತಾರೆ. ಹೀಗಾಗಿ ತಕ್ಷಣ ಸ್ಪಂದಿಸುವ ಅಗತ್ಯವಿದ್ದು, ಅವುಗಳನ್ನು ಸೆರೆ ಹಿಡಿಯಲು ಸಿಬ್ಬಂದಿಗೆ ಸುರಕ್ಷತಾ ಉಪಕರಣಗಳು, ಬೋನುಗಳು ಮತ್ತು ವಾಹನ ಒದಗಿಸುವಂತೆಯೂ ಈಶ್ವರ ಖಂಡ್ರೆ ಸೂಚಿಸಿದರು. ಪ್ರಧಾನ ಮುಖ್ಯ ಅರಣ್ಯ ಸಂರಕ್ಷಣಾಧಿಕಾರಿ ಮತ್ತು ಅರಣ್ಯ ಕಾರ್ಯಪಡೆ ಮುಖ್ಯಸ್ಥರಾದ ಮೀನಾಕ್ಷಿ ನೇಗಿ, ಮುಖ್ಯ ವನ್ಯಜೀವಿ ಪರಿಪಾಲಕರಾದ ಕುಮಾರ್ ಪುಷ್ಕರ್, ಕಾಂಪಾ ವಿಭಾಗದ ಪಿಸಿಸಿಎಫ್ ರಾಧಾದೇವಿ ಮತ್ತಿತರರು ಪಾಲ್ಗೊಂಡಿದ್ದರು.

# ವಿಶ್ವಶಾಂತಿಗಾಗಿ ಮಹಾಶಿವಯೋಗ ಅನುಷ್ಠಾನ

**ವಿಜಯಪುರ,ಮೇ.21:** ತಾಲೂಕಿನ ದೇವಾಲಯದ ಧರ್ಮದರ್ಶಿ ಪೂಜ್ಯಶ್ರೀ ಲಕ್ಷ್ಮಣ ಮಹಾಶಿವಯೋಗ ಅನುಷ್ಠಾನವನ್ನು

ವಿಶ್ವದಲ್ಲಿ ಉತ್ತಮವಾದ ಮಳೆಯಾಗಿ ಬೆಳೆ ಜೀವನವನ್ನು ಸಾಗಿಸಬೇಕು. ಎಲ್ಲರೂ ಧರ್ಮದ ಜಗದೊಡೆಯನಾದ ಶ್ರೀಗಿರಿಯ ಶ್ರೀ ಮಹಾಶಿವಪೂಜೆಯನ್ನು ಸಲ್ಲಿಸಿ ಧರ್ಮ ಜ್ಯೋತಿರ್ಲಿಂಗಗಳ ಸಾಮೂಹಿಕ ಸದುದ್ದೇಶವನ್ನು ಇಟ್ಟುಕೊಂಡು ಶಿವಪಂಚಾಕ್ಷರಿ ಮಹಾಮಂತ್ರ ಜಪಯಜ್ಞವನ್ನು ಮಾಡಿ ವಿಶ್ವಶಾಂತಿಗಾಗಿ ಮಹಾಶಿವಯೋಗ



ಬುರಣಾಪೂರದ ಶ್ರೀ ಮಲ್ಲಿಕಾರ್ಜುನ ಶಿವಶರಣರು ಲೋಕಕಲ್ಯಾಣಕ್ಕಾಗಿ ಪ್ರಾರಂಭಿಸಿದ್ದಾರೆ.

ಬಂದು ಸರ್ವರೂ ಶಾಂತಿಯುತವಾದ ಮಾರ್ಗದಲ್ಲಿ ನಡೆಯಬೇಕೆಂದು ಮಲ್ಲಿಕಾರ್ಜುನನಿಗೆ ಸಹಸ್ರನಾಮಾವಳಿಯ ಜಾಗೃತಿಗಾಗಿ ದಿನಾಲೂ 12 ಲಿಂಗಾರ್ಚನೆಯನ್ನು ನೆರವೇರಿಸುವ ಲೋಕೋದ್ಧಾರಕ್ಕಾಗಿ 208 ಕೋಟಿ ಪೂರ್ಣಗೊಳಿಸುವ ಶುಭಸಂಕಲ್ಪವನ್ನು ಅನುಷ್ಠಾನವನ್ನು ಪ್ರಾರಂಭಿಸಿದ್ದಾರೆ ಎಂದು

ಸಮಾಜ ಸೇವಕ ಹನಮಂತ ಪುಟ್ಟಿ ಅವರು ಪತ್ರಿಕಾ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಭಯೋತ್ಪಾದನೆ ನಿರ್ಮೂಲನೆಗೆ ದೃಢ ಸಂಕಲ್ಪದೊಂದಿಗೆ ಕಾರ್ಯನಿರ್ವಹಣೆ ಅಗತ್ಯ



**ಕಲಬುರಗಿ:ಮೇ.21:** ನಮ್ಮ ದೇಶ ಸೇರಿದಂತೆ ವಿಶ್ವದಲ್ಲಿ ದಿನನಿತ್ಯಲೂ ನೂರಾರು ಅಮಾಯಕರ ಸಾವಿಗೆ ಕಾರಣವಾಗಿ, ಜಗತ್ತನ್ನು ತಲ್ಲಣಗೊಳಿಸಿ, ಅಶಾಂತಿಯುತವಾದ ವಾತಾವರಣದ ಸೃಷ್ಟಿಗೆ ಕಾರಣೀಕೃತವಾದ ಭಯೋತ್ಪಾದನೆ ಎಂಬುದು ದೊಡ್ಡ ಸಾಮಾಜಿಕ ಪಿಡುಗಾಗಿದೆ. ರಾಷ್ಟ್ರದ ಶಾಂತಿ, ಅಭಿವೃದ್ಧಿಗೆ ಇದು ತೊಡಕಾಗಿದ್ದು, ಅದರ ನಿರ್ಮೂಲನೆಗೆ ಎಲ್ಲರೂ ಜೊತೆಗೂಡಿ ಬೇರು ಸಹಿತ ಸರ್ವನಾಶ ಮಾಡುವ ದೃಢ ಸಂಕಲ್ಪದೊಂದಿಗೆ ಕಾರ್ಯನಿರ್ವಹಿಸಬೇಕಾಗಿದೆ. ಭಯೋತ್ಪಾದನೆಗೆ ಎಂದಿಗೂ ಕೂಡಾ ಪ್ರತ್ಯಕ್ಷವಾಗಲಿ ಅಥವಾ ಪರೋಕ್ಷವಾಗಿ ಆಗಲಿ ಬೆಂಬಲಿಸುವುದು ದೇಶದ್ರೋಹ ಕೆಲಸವಾಗಿದೆ ಎಂದು ಉಪನ್ಯಾಸಕ, ಚಿಂತಕ ಎಚ್.ಬಿ.ಪಾಟೀಲ ಹೇಳಿದರು.

ನಗರದ ಆಳಂದ ರಸ್ತೆಯ ಸಂತೋಷ ಕಾಲನಿ ಕ್ರಾಸ್ ಸಮೀಪದ 'ರಿಪಬ್ಲಿಕ್ ಸ್ಪೋಕನ್ ಇಂಗ್ಲೀಷ್ ಅಕಾಡೆಮಿ'ಯಲ್ಲಿ 'ಬಸವೇಶ್ವರ ಸಮಾಜ ಸೇವಾ ಬಳಗ'ದ ಗುರುವಾರ 'ರಾಷ್ಟ್ರೀಯ ಭಯೋತ್ಪಾದನಾ ವಿರೋಧಿ ದಿನಾಚರಣೆ'ಯ ಕಾರ್ಯಕ್ರಮದಲ್ಲಿ ಪ್ರತಿಜ್ಞಾ ವಿಧಿ ಬೋಧಿಸಿ ಅವರು ಮಾತನಾಡುತ್ತಿದ್ದರು.

ಶಾಂತಿ, ಅಹಿಂಸೆ ಹಾಗೂ ಸಹನೆಗೆ ಹೆಸರಾದ ನಮ್ಮ ದೇಶದಲ್ಲಿ ಕೆಲವು ದುಷ್ಟ ಶಕ್ತಿಗಳು ಸಮಾಜದಲ್ಲಿ ಅರಾಜಕತೆಯ ವಾತವರಣವನ್ನು ಸೃಷ್ಟಿಸುವ ಕಾರ್ಯವನ್ನು ಮಾಡುತ್ತಿವೆ. ಅಂತಹ ಸಂದರ್ಭದಲ್ಲಿ ಪ್ರತಿಯೊಬ್ಬ ಭಾರತೀಯ ಒಕ್ಕೊರಲಿನಿಂದ ಖಂಡಿಸುವ ಮೂಲಕ, ಅದರ ನಾಶಕ್ಕೆ ಶ್ರಮಿಸಬೇಕಾಗಿದೆ ಎಂದು ಮಾರ್ಮಿಕವಾಗಿ ನುಡಿದರು.ಕಾರ್ಯಕ್ರಮದಲ್ಲಿ ಸಂಸ್ಥೆಯ ಅಧ್ಯಕ್ಷ ದತ್ತು ಹಡಪದ, ಸಮಾಜ ಸೇವಕ ಶಿವಯೋಗೆಪ್ಪಾ ಎಸ್.ಬಿರಾದಾರ, ಡಾ.ರಾಜಶೇಖರ ಪಾಟೀಲ, ದಿನೇಶ್ ಮಿಶ್ರಾ ಹಾಗೂ ವಿದ್ಯಾರ್ಥಿಗಳು ಭಾಗವಹಿಸಿದ್ದರು.

# ಹೊಟೇಲಗಳ ಪರಿಶೀಲನೆ



**ನವಲಗುಂದ,ಮೇ.21:** ಪುರಸಭೆ ವ್ಯಾಪ್ತಿಯ ಹೋಟೆಲ್ ಹಾಗೂ ಆಹಾರ ಮಂದಿರಗಳ ಮೇಲೆ ಪುರಸಭೆ ಅಧಿಕಾರಿಗಳ ತಂಡ ಮಂಗಳವಾರ ದಿಢೀರ್ ದಾಳಿ ನಡೆಸಿ ಪರಿಶೀಲನೆ ನಡೆಸಿದರು.

ಕಾರ್ಯಾಚರಣೆಯಲ್ಲಿ ಹೋಟೆಲ್ ಅಡುಗೆ ಕೋಣೆ ಹಾಗೂ ಆವರಣ ಅಸ್ವಚ್ಛತೆಯಿಂದ ಕಂಡಿದ್ದು. ಜೊತೆಗೆ ಆಹಾರ ತಯಾರಿಕೆಯಲ್ಲೂ ಶುಚಿತ್ವ ಇಲ್ಲದ್ದನ್ನು ಗಮನಿಸಿದ ಅಧಿಕಾರಿಗಳು ಮಾಲಕರು, ಹೋಟೆಲ್ ಸಿಬ್ಬಂದಿಯನ್ನು ತರಾಟೆಗೆ ತೆಗೆದುಕೊಂಡರು.

ಹೊಟೇಲ್‌ನ ಒಳಗೆ ಮತ್ತು ಹೊರಗೆ ಸ್ವಚ್ಛತೆಯನ್ನು ಕಾಯ್ದುಕೊಂಡಿರುವುದಿಲ್ಲ. ಹೊಟೇಲ್ ನಲ್ಲಿ ಶುದ್ಧ ಕುಡಿಯುವ ನೀರಿನ ಪೂರೈಕೆ ವ್ಯವಸ್ಥೆ ಇರುವುದಿಲ್ಲ. ಇದರಿಂದಾಗಿ ಸಾರ್ವಜನಿಕರಿಗೆ ಅನಾರೋಗ್ಯ ಸಮಸ್ಯೆ ಕಂಡು ಬರುವ ಪರಿಸ್ಥಿತಿಗೆ ನೀವೇ ಕಾರಣವಾಗುತ್ತಿದ್ದೀರಿ

ಹೋಟೆಲ್ ಸ್ವಚ್ಛತೆ ಸುಧಾರಿಸದಿದ್ದರೆ. ಕರ್ನಾಟಕ ಪುರಸಭೆ ಅಧಿನಿಯಮ, ಆಹಾರ ಸುರಕ್ಷತಾ ಅಧಿನಿಯಮಗಳ ಅನುಸಾರ ನಿಮ್ಮ ಮೇಲೆ ಕ್ರಮ ಜರುಗಿಸುವುದಾಗಿ ನೋಟಿಸ್ ನೀಡಿ ಪರವಾನಗಿ ರದ್ದುಗೊಳಿಸುವುದಾಗಿ ಎಚ್ಚರಿಕೆ ನೀಡಿದರು.

ಈ ವೇಳೆ ಮುಖ್ಯಾಧಿಕಾರಿ ಎಸ್ ಪಿ ಪೂಜಾರ ಮಾಧ್ಯಮಕ್ಕೆ ಪ್ರತಿಕ್ರಿಯೆ ನೀಡಿ ಹೋಟೆಲ್‌ಗಳಲ್ಲಿ ಶುದ್ಧ ನೀರು ಹಾಗೂ ಆಹಾರ ನೀಡಬೇಕು ಯಾವುದೇ ಕಾರಣಕ್ಕೂ ಗೃಹ ಬಳಕೆಯ ಸಿಲಿಂಡರ್‌ಗಳನ್ನು ಬಳಸಬಾರದು. ಜೊತೆಗೆ ಅಗತ್ಯಕ್ಕಿಂತ ಹೆಚ್ಚಿನ ಸಿಲಿಂಡರ್‌ಗಳನ್ನು ದಾಸ್ತಾನು ಮಾಡಿ ಅಪಾಯಕ್ಕೆ ಆಹ್ವಾನ ನೀಡಬಾರದು ಎಂದು ಎಚ್ಚರಿಕೆ ನೀಡಲಾಗಿದೆ ಎಂದರು.

ಆರೋಗ್ಯ ನಿರೀಕ್ಷಕಿ ಸಾವಿತ್ರಿ ಮುಶನವ್ವರ, ಅನಿಲ್ ಜೋಶಿ ಹಾಗೂ ತಂಡದ ಸದಸ್ಯರು ಇದ್ದರು.

# ಔಷಧ ಅಂಗಡಿಗಳು ಸಂಪೂರ್ಣ ಬಂದ್



**ಬಸವನಬಾಗೇವಾಡಿ:ಮೇ.21:** ಔಷಧಗಳನ್ನು ಆನ್ಲೈನ್ ಸೇವೆ ಮೂಲಕ ವಿತರಿಸುವುದನ್ನು ಸ್ಥಗಿತಗೊಳಿಸಬೇಕು ಎಂದು ಅಖಿಲ ಭಾರತ ಔಷಧ ವ್ಯಾಪಾರಸ್ಥರ ಸಂಘ ಕರ್ನಾಟಕ ರಾಜ್ಯ ಔಷಧ ವ್ಯಾಪಾರಸ್ಥರ ಸಂಘ ಜಿಲ್ಲಾ ಹಾಗೂ ಬಸವನಬಾಗವಾಡಿ ತಾಲೂಕ ಔಷಧ ವ್ಯಾಪಾರ ಸಂಘದ ನೇತೃತ್ವದಲ್ಲಿ ದಿನಾಂಕ್ 20ರಂದು ಪಟ್ಟಣದ ಎಲ್ಲಾ ಔಷದ ಅಂಗಡಿಗಳನ್ನು ಒಂದು ದಿವಸ ಸಂಪೂರ್ಣ ಬಂಧಗೊಳಿಸಲಾಯಿತು ತಾಲೂಕ ಎಲ್ಲಾ ಔಷದ ವ್ಯಾಪಾರಸ್ಥರು ಶ್ರೀ ಬಸವೇಶ್ವರ ವೃತ್ತದಲ್ಲಿ ಜಮಾವನೆಗೊಂಡು ಸಂಕೇತಿಕವಾಗಿ ಬಂದ ಆಚರಿಸುವ ಜೊತೆಗೆ ತಾಲೂಕಿನ ದಂಡಾಧಿಕಾರಿಗಳ ಮೂಲಕ ಮನವಿಯನ್ನು ಅರ್ಪಿಸಿ ಜಿಲ್ಲಾ ವ್ಯಾಪಾರಸ್ಥರ ಸಂಘದ ಉಪಾಧ್ಯಕ್ಷರಾದ ಶ್ರೀ ರಮೇಶ್ ಯಳಮೇಲಿ ಮಾತನಾಡಿ ಆನ್ಲೈನ್ ಸೇವೆಯ ನೆಪದಲ್ಲಿ ಔಷಧ ಪೂರೈಸುತ್ತಿರುವ ಕೆಲವು ಕಂಪನಿಗಳು ಗ್ರಾಹಕರಿಗೆ ಸರಿಯಾದ ಮೆಡಿಸನ್ ನೀಡದೆ ವಂಚಿಸುತ್ತಿವೆ ಅಲ್ಲದೆ ಕೆಲವು ಖಾಸಗಿ ದೊಡ್ಡ ದೊಡ್ಡ ಕಂಪನಿಗಳು ಔಷಧಗಳಿಗೆ ಹೆಚ್ಚಿನ ರಿಯಾಯಿತಿ ನೀಡಿ ಗ್ರಾಹಕರನ್ನು ದಾರಿ ತಪ್ಪಿಸುತ್ತಿವೆ ಈ ವ್ಯವಸ್ಥೆಯನ್ನು ಸಂಪೂರ್ಣ ಬಂದ ಮಾಡಬೇಕೆಂದು ಆಗ್ರಹಿಸಿ ಮಾತನಾಡಿದರು ಅದೇ ರೀತಿಯಾಗಿ ತಾಲೂಕ ಔಷಧ ವ್ಯಾಪಾರಸ್ಥರ ಸಂಘದ ಅಧ್ಯಕ್ಷರಾದ ಶ್ರೀ ಪ್ರಭು ಪಟ್ಟಣಶೆಟ್ಟಿ ಮಾತನಾಡಿ ಕೆಲವೊಂದು ಔಷಧಗಳಿಗೆ ಸರಕಾರವು ವೈದ್ಯರ ಅನುಮತಿಯನ್ನು ಪಡೆದು ಔಷಧಿಗಳನ್ನು ಮಾರಬೇಕು ಆದರೆ ಆನ್ಲೈನ್ ಮೂಲಕ ಅಂತ ನಿಬರ್ಂಧಿತ ಔಷಧಿಗಳನ್ನು ತರಿಸಿಕೊಳ್ಳುತ್ತಾರೆ ಡಾಕ್ಟರ್ ಸಲಹೆ ಇಲ್ಲದೆ ಇಂಥ ಔಷಧಗಳನ್ನು ಸೇವಿಸುವುದರಿಂದ ಗ್ರಾಹಕರ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುತ್ತವೆ ಕಾರಣ ಸರ್ಕಾರ ಕೂಡಲೇ ಆನ್ಲೈನ್ ಔಷಧಿಯನ್ನು ರದ್ದುಗೊಳಿಸಬೇಕೆಂದು ಮಾತನಾಡಿದರು ಇದೇ ರೀತಿಯಾಗಿ ಶ್ರೀಕಾಂತ್ ಕೊಟ್ರಶೆಟ್ಟಿ ಮಾತನಾಡಿ ಅಪೊಲೋ ಮೆಡ್ಲಸ್ ಔಷಧಿ ಅಂಗಡಿಗಳು ಗ್ರಾಹಕರಿಗೆ ಹೆಚ್ಚಿನ ರೀತಿಯಲ್ಲಿ ತೋರಿಸಿ ಔಷಧ ವ್ಯಾಪಾರ ಮಾಡುತ್ತಾರೆ ಇದರಿಂದ ಸಣ್ಣ ಸಣ್ಣ ಔಷಧಿ ವ್ಯಾಪಾರಸ್ಥರಿಗೆ ಹಾನಿಯಾಗುವುದರ ಜೊತೆಗೆ ಅವರ ಅಂಗಡಿಗಳನ್ನು ಬಂದು ಮಾಡುವ ಪರಿಸ್ಥಿತಿ ಬಂದಿದೆ ಎಂದರು ಈ ಈ ಬಂಧದಲ್ಲಿ ಎಲ್ಲಾ ಔಷಧಿ ವ್ಯಾಪಾರಸ್ಥರಾದ ಶ್ರೀಕಾಂತ್ ಕೋರಿ ಮಹಾವೀರ್ ಹೊಸಮನಿ ಅಶೋಕ ಮುಳವಾಡ ಪ್ರಭು ಪಟ್ಟಣಶೆಟ್ಟಿ ವಿದ್ಯಾಧರ ಉಪಾಧ್ಯಾ ರಾಘವೇಂದ್ರ ಸೋಮನಕಟ್ಟಿ ಮಲ್ಲಿಕಾರ್ಜುನ್ ಮಠ ಎಸ್ ಎ ನದಾಫ ಶೇಖರ್ ಹೂಗಾರ ಶಿವಾನಂದ್ ಬಿದರಿ ರಾಮದೇವ್ ಮೆಡಿಕಲ್ ಇಂಡಿಯನ್ ಮೆಡಿಕಲ್ ಹೋರಾಟದಲ್ಲಿ ಭಾಗವಹಿಸಿ ಮಾನ್ಯ ದಂಡಾಧಿಕಾರಿ ಮೂಲಕ ಸರ್ಕಾರಕ್ಕೆ ಕಳಿಸಲು ಮನವಿ ಅರ್ಪಿಸಲಾಯಿತು

# ಮಾನವೀಯ ಮೌಲ್ಯಗಳ ಅಳವಡಿಕೆಗೆ ಮಹನೀಯರ ತತ್ವಗಳು ದಾರಿದೀಪ: ರಾಜಕುಮಾರ ಎಚ್. ಕಪನೂರ



**ಆಳಂದ: ಮೇ.21**:ಸಮಾಜದಲ್ಲಿ ಸಮಾನತೆ, ಶಿಕ್ಷಣ ಹಾಗೂ ಮಾನವೀಯ ಮೌಲ್ಯಗಳ ಅರಿವು ಪ್ರತಿಯೊಬ್ಬರಲ್ಲೂ ಮೂಡಬೇಕು. ಭಗವಾನ್ ಗೌತಮ ಬುದ್ಧ, ಜಗಜ್ಯೋತಿ ಬಸವೇಶ್ವರ ಹಾಗೂ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ ತತ್ವಗಳು ಇಂದಿನ ಸಮಾಜಕ್ಕೆ ದಾರಿದೀಪವಾಗಿವೆ ಎಂದು ಕಲಬುರಗಿ ಮಹಾನಗರ ಪಾಲಿಕೆ ಮಾಜಿ ಸದಸ್ಯ ರಾಜಕುಮಾರ ಎಚ್. ಕಪನೂರ ಹೇಳಿದರು.

ತಾಲೂಕಿನ ಹಳ್ಳಿಸಲಗರ ಗ್ರಾಮದಲ್ಲಿ ಆಯೋಜಿಸಿದ್ದ ಭಗವಾನ್ ಗೌತಮ ಬುದ್ಧ, ಜಗಜ್ಯೋತಿ ಬಸವೇಶ್ವರ ಹಾಗೂ ಭಾರತ ರತ್ನ ಡಾ. ಬಿ.ಆರ್. ಅಂಬೇಡ್ಕರ್ ಅವರ 135ನೇ ಜಯಂತ್ಯೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಶೋಷಿತರು, ಹಿಂದುಳಿದವರು ಹಾಗೂ ಸಾಮಾನ್ಯ ಜನರ ಬದುಕಿಗೆ ಗೌರವ ಮತ್ತು ಆತ್ಮಸಮ್ಮಾನ ತಂದುಕೊಟ್ಟ ಮಹನೀಯರ ಆದರ್ಶಗಳನ್ನು ಯುವಜನತೆ ತಮ್ಮ ಜೀವನದಲ್ಲಿ ಅಳವಡಿಸಿಕೊಳ್ಳಬೇಕು. ಸಮಾಜದಲ್ಲಿ ಶಾಂತಿ, ಸಹಬಾಳ್ವೆ ಮತ್ತು ಸೌಹಾರ್ದತೆಯನ್ನು ಬೆಳೆಸುವಲ್ಲಿ ಇವರ ಚಿಂತನೆಗಳು ಮಹತ್ವದ ಪಾತ್ರವಹಿಸುತ್ತವೆ ಎಂದು ಹೇಳಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಡಾ. ಬಸವಂತರಾವ ಸಿ. ಪಾಟೀಲ ಮಾತನಾಡಿ, ಮಹನೀಯರು ಸಮಾನತೆಯ ಸಮಾಜ ನಿರ್ಮಾಣಕ್ಕಾಗಿ ಹೋರಾಡಿದವರು. ಅವರ ಸಂದೇಶಗಳು ಇಂದಿನ ಪೀಳಿಗೆಗೆ ಮಾರ್ಗದರ್ಶಕವಾಗಿವೆ ಎಂದರು.

ಬಿಜೆಪಿ ಮುಖಂಡ ಆನಂದರಾವ ಪಾಟೀಲ, ಪುರಸಭೆ ಮಾಜಿ ಸದಸ್ಯ ಶಿವಪುತ್ರ ನಡಗೇರಿ, ಮಹೇಶ ಪಾಟೀಲ ಹಾಗೂ ಮಲ್ಲಿನಾಥ ಕೊಗನೂರ ಮಾತನಾಡಿ, ಬುದ್ಧ, ಬಸವೇಶ್ವರ ಮತ್ತು ಡಾ. ಅಂಬೇಡ್ಕರ್ ಅವರ ಜೀವನ ಸಾಧನೆಗಳು ಸಮಾಜ ಪರಿವರ್ತನೆಗೆ ಪ್ರೇರಣೆಯಾಗಿವೆ ಎಂದು ಅಭಿಪ್ರಾಯಪಟ್ಟರು.

ಗೌರವ ಅಧ್ಯಕ್ಷತೆ ವಹಿಸಿದ್ದ ಶರಣಗೌಡ ಎಂ. ಪೊಲೀಸ್ ಪಾಟೀಲ, ರಮೇಶ್ ಬಿರಾದಾರ, ಸಿದ್ಧಾರೂಢ ಸರಸಂಬಿ, ಶ್ರೀಶೈಲ ಸುತಾರ ಮುನ್ನೊಳ್ಳಿ, ಸಂತೋಷ ಹಾದಿಮನಿ, ಬಸವಂತರಾವ ಎಂ. ಮಾಲೀಪಾಟೀಲ, ಬಸವರಾಜ ಕೆರೂರ್ ಹಾಗೂ ಶಿವಾನಂದ ಬೇಡಜೂರ್ಗಿ ಮಹನೀಯರ ಭಾವಚಿತ್ರಗಳಿಗೆ ಪೂಜೆ ಸಲ್ಲಿಸಿದರು.

ಕಾಶಿನಾಥ ಬಿರಾದಾರ, ಮಲ್ಲಿನಾಥ ಕೊಗನೂರ, ಸುಲ್ತಾನಪ್ಪ ವಾಗ್ದರಗಿ, ಲಕ್ಷ್ಮಣ ಝುಳಕಿ, ಪಪ್ಪು ತೋಳೆ, ರಜನೀಶ ಜಂಗಲೇ, ಅಜಯ್ ಸಿ.ಎಂ., ಚಾಂದಸಾಬ ಮುಲ್ಲಾ, ಮಸ್ತಾನ ಮುಲ್ಲಾ, ಗುರುರಾಜ ಮಾಲೀಪಾಟೀಲ, ಗಂಗಾಧರ ಕೊಗನೂರ ಹಾಗೂ ಮಹಾದೇವ ಶೇರಿಕಾರ ಸಮಾರಂಭದಲ್ಲಿ ಜ್ಯೋತಿ ಬೆಳಗಿಸಿದರು.

ಮುಖ್ಯ ಅತಿಥಿಗಳಾಗಿ ಸೂರ್ಯಕಾಂತ ಸರಸಂಬಿ, ರಾಜಶೇಖರ ಸರಸಂಬಿ, ದಿಲೀಪ ಕ್ಷೀರಸಾಗರ, ಬಸವರಾಜ ಎಂ. ಸರಸಂಬಿ, ಸಂಜಯ ರಾಠೋಡ, ಆನಂದ ನಡಗೇರಿ, ಅಪ್ಪಾರಾವ ಪೂಜಾರಿ, ಅಶೋಕ ವೈರಾಗಿ, ವಿಶ್ವನಾಥ ಪಾಟೀಲ, ಮಡಿವಾಳಯ್ಯ ಸ್ವಾಮಿ, ಲಕ್ಷ್ಮಿಕಾಂತ ಜಂಗಲೇ, ಶಿವಾನಂದ ಸರಸಂಬಿ, ಬಸವರಾಜ ಕಲಕುರಕಿ, ಆದಂ ಜಮಾದಾರ, ರಾಜಕುಮಾರ ನಾಗುಂಡೆ ಸೇರಿದಂತೆ ಅನೇಕರು ಭಾಗವಹಿಸಿದ್ದರು.

ಇದಕ್ಕೂ ಮುನ್ನ ನಡೆದ ಭವ್ಯ ಮೆರವಣಿಗೆಯನ್ನು ಪ್ರಬುದ್ಧ ಆರ್. ಪಾಟೀಲ ಹಾಗೂ ಅಶೋಕ ಎನ್. ಪಾಟೀಲ ಉದ್ಘಾಟಿಸಿದರು. ಮೆರವಣಿಗೆಯಲ್ಲಿ ಗ್ರಾಮಸ್ಥರು ಹಾಗೂ ಯುವಕರು ಉತ್ಸಾಹದಿಂದ ಪಾಲ್ಗೊಂಡು ಮಹನೀಯರ ಜಯಘೋಷ ಮೊಳಗಿಸಿದರು.

ಕಾರ್ಯಕ್ರಮದ ಯಶಸ್ಸಿಗೆ ಸಮಿತಿಯ ವ್ಯವಸ್ಥಾಪಕ ಸಿದ್ರಾಮ ವಾಗ್ಮೋರೆ, ಸೋಮನಾಥ ವಠಾರ, ಗುರುಬಸಪ್ಪ ವಾಗ್ಮೋರೆ, ದತ್ತಾತ್ರೇಯ ವಾಗ್ಮೋರೆ, ಲಕ್ಷ್ಮಣ ಆರೆ, ಸಂಪತಬಾಯಿ ವಾಗ್ಮೋರೆ, ಅನೀಲಕುಮಾರ ಸಿಂಗೆ, ಗೌತಮ ಕುಂಟನೂರ, ನೀಲಕಂಠ ವಠಾರ, ಸಾಯಬಣ್ಣ ಸಿಂಗೆ, ಜಗದೀಶ ವಠಾರ, ಆಕಾಶ ನಡಗೇರಿ, ಅಂಕುಶ ವಾಗ್ಮೋರೆ, ಅಭಿಲಾಷ ವಾಗ್ಮೋರೆ, ಮಲ್ಲು ಆರೆ, ರೋಹಿತ್ ವಠಾರ, ಸಚಿನ್ ವಾಗ್ಮೋರೆ, ಸಾಗರ ವಿ. ಸಿಂಗೆ, ಶರಣಬಸಪ್ಪ ವಾಗ್ಮೋರೆ, ಪ್ರಜ್ವಲ ವಾಗ್ಮೋರೆ, ಶರಣಬಸಪ್ಪ ಎಚ್. ಆರೆ, ಸೋನ್ಯಾ ವಾಗ್ಮೋರೆ, ಕುಪೇಂದ್ರ ಕುಂಟನೂರ, ಸಂತೋಷ ಪಡಸಾವಳಿ, ಚೇತನ ವಠಾರ ಹಾಗೂ ರಘುವೀರ ವಠಾರ ಸೇರಿದಂತೆ ಅನೇಕರು ಸಹಕರಿಸಿದರು. ದಿಲೀಪ ಕ್ಷೀರಸಾಗರ ಕಾರ್ಯಕ್ರಮ ನಿರೂಪಿಸಿದರು. ನಾಗರಾಜ ಸಿಂಗೆ ಸ್ವಾಗತಿಸಿದರು. ಜಯಾನಂದ ಸಿಂಗೆ ವಂದಿಸಿದರು. ಡಾ. ಬಸವರಾಜ ಸಿ. ಪಾಟೀಲ ಅನ್ನ ಸಂತರ್ಪಣೆ ವ್ಯವಸ್ಥೆ ಮಾಡಿದರು.

# ಜನರ ನೆರವಿಗೆ ತಕ್ಷಣ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಶಾಸಕ ಡಾ. ಶೈಲೇಂದ್ರ ಬೆಲ್ದಾಳೆ ಸೂಚನೆ



**ಬೀದರ್:ಮೇ.21**: ಬೀದರ್ ದಕ್ಷಿಣ ಕ್ಷೇತ್ರದ ಕೋಳಾರ (ಬಿ) ಗ್ರಾಮಕ್ಕೆ ಶಾಸಕರಾದ ಡಾ. ಶೈಲೇಂದ್ರ ಬೆಲ್ದಾಳೆ ಅವರು ಭೇಟಿ ನೀಡಿ, ನಿನ್ನೆ ಸುರಿದ ಅಕಾಲಿಕ ಮಳೆ ಹಾಗೂ ಬಿರುಗಾಳಿಯಿಂದ ಉಂಟಾದ ಹಾನಿಯನ್ನು ಸ್ಥಳವನ್ನು ಪರಿಶೀಲಿಸಿದರು.

ಮಳೆಯಿಂದ ವಿವಿಧ ಗ್ರಾಮಗಳಲ್ಲಿ ಮನೆಗಳಿಗೆ ನೀರು ನುಗ್ಗಿ ಕುಟುಂಬಗಳು ಸಂಕಷ್ಟಕ್ಕೆ ಸಿಲುಕಿರುವುದು, ಕೃಷಿ ಬೆಳೆಗಳಿಗೆ ಹಾನಿಯಾಗಿರುವುದು ಹಾಗೂ ಕೆಲ ಸಾರ್ವಜನಿಕ ಮೂಲಸೌಕರ್ಯಗಳು ಹಾನಿಗೊಳಗಾಗಿರುವ ಬಗ್ಗೆ ಗ್ರಾಮಸ್ಥರು ಶಾಸಕರ ಗಮನಕ್ಕೆ ತಂದರು. ಸ್ಥಳೀಯರ ಅಹವಾಲುಗಳನ್ನು ಆಲಿಸಿದ ಶಾಸಕರು, ಹಾನಿಯ ಸಂಪೂರ್ಣ ಮಾಹಿತಿ ಸಂಗ್ರಹಿಸಿ ಸರ್ಕಾರಕ್ಕೆ ವರದಿ ಸಲ್ಲಿಸಿ, ಅರ್ಹ ಫಲಾನುಭವಿಗಳಿಗೆ ತಕ್ಷಣ ಪರಿಹಾರ ಒದಗಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು.

ವಿಶೇಷವಾಗಿ ರೈತರಿಗೆ ಉಂಟಾದ ಬೆಳೆ ನಷ್ಟದ ಕುರಿತು ಕೃಷಿ ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಶೀಘ್ರ ಸಮೀಕ್ಷೆ ನಡೆಸಿ, ಸರ್ಕಾರದ ನಿಯಮಾನುಸಾರ ಪರಿಹಾರ ಕಲ್ಪಿಸಬೇಕೆಂದು ತಿಳಿಸಿದರು. ಯಾವುದೇ ಕುಟುಂಬ ಸರ್ಕಾರದ ನೆರವಿನಿಂದ ವಂಚಿತವಾಗಬಾರದು ಎಂದು ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಇದೇ ವೇಳೆ ಗಾಳಿ-ಮಳೆಯಿಂದ ನೆಲಕುರುಳಿದ ವಿದ್ಯುತ್ ಕಂಬಗಳು ಹಾಗೂ ಹಾನಿಗೊಂಡ ವಿದ್ಯುತ್ ಸಂಪರ್ಕ ವ್ಯವಸ್ಥೆಯನ್ನು ತಕ್ಷಣ ಸರಿಪಡಿಸಿ ಗ್ರಾಮದಲ್ಲಿ ನಿರಂತರ ವಿದ್ಯುತ್ ಪೂರೈಕೆ ಕಲ್ಪಿಸುವಂತೆ ವಿದ್ಯುತ್ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು. ಮಳೆಯಿಂದ ಮರಗಳು ಉರುಳಿ ಹಾನಿಗೊಂಡ ರಸ್ತೆಗಳು ಮತ್ತು ಚರಂಡಿಗಳ ದುರಸ್ತಿ ಕಾರ್ಯ ಕೂಡ ತುರ್ತುವಾಗಿ ಕೈಗೊಳ್ಳುವಂತೆ ಸಂಬಂಧಿಸಿದ ಇಲಾಖೆಗೆ ತಿಳಿಸಿದರು.

ಸಂಕಷ್ಟದ ಸಮಯದಲ್ಲಿ ಜನರ ಜೊತೆ ನಾವು ಸದಾ ನಿಂತಿರುತ್ತೇವೆ. ಜನರು ಯಾವುದೇ ಆತಂಕಕ್ಕೆ ಒಳಗಾಗದೇ ಸಮಸ್ಯೆಗಳ ಬಗ್ಗೆ ಸ್ಥಳೀಯ ಆಡಳಿತ ಮತ್ತು ಜನಪ್ರತಿನಿಧಿಗಳ ಗಮನಕ್ಕೆ ತರಬೇಕು ಎಂದು ಶಾಸಕರು ಹೇಳಿದರು.

ಈ ಸಂದರ್ಭದಲ್ಲಿ ತೋಟಗಾರಿಕೆ ಹಿರಿಯ ಸಹಾಯಕ ನಿರ್ದೇಶಕರಾದ ಸಚೀನ್, ಜೆಸ್ಕಾಂ ಎಇಇ ರಮೇಶ್ ಪಾಟೀಲ ಮುಖಂಡರಾದ ರೇವಣ್ಣಪ್ಪ ಚಿಲ್ಲರ್ಗಿ ರಾಜಶೇಖರ ನೌಬಾದೆ, ಅನೀಲ ಗುನ್ನಳ್ಳಿ, ಬಾಬಶೆಟ್ಟಿ ಅತಿವಾಳ, ಕಾಶಿನಾಥ ಮೇತ್ರೆ, ಸತೀಶ ಹೊಕ್ರಾಣೆ, ಗ್ರಾಮಸ್ಥರು, ವಿವಿಧ ಇಲಾಖೆಯ ಅಧಿಕಾರಿಗಳು ಹಾಗೂ ಬಿಜೆಪಿ ಮುಖಂಡರು ಉಪಸ್ಥಿತರಿದ್ದರು.

ಸುದ್ದಿ ಮತ್ತು
ಜಾಹೀರಾತಿಗಾಗಿ
ಸಂಪರ್ಕಿಸಿ
6360866626

# ಆರ್‌ಸೇಟಿನಿಂದ ಸಹಾಯಕ ಬುಕ್ಕೀಪರ್ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು ಮೇ.21:** ರಾಯಚೂರಿನ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ, ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಇವರ ವತಿಯಿಂದ ಗ್ರಾಮೀಣ ನಿರುದ್ಯೋಗಿ ಮಹಿಳೆಯರಿಗಾಗಿ ಸಹಾಯಕ ಬುಕ್ಕೀಪರ್ ತರಬೇತಿಗಾಗಿ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

ತರಬೇತಿಯು 2026ರ ಮೇ.25ರಿಂದ ಪ್ರಾರಂಭವಾಗಿ 38ದಿನಗಳ ಕಾಲ ನಡೆಯಲಿದೆ. ತರಬೇತಿಯ ಅವಧಿಯಲ್ಲಿ ಅಭ್ಯರ್ಥಿಗಳಿಗೆ ಉಚಿತ ಊಟ ಹಾಗೂ ಉಚಿತ ವಸತಿ ಸೌಕರ್ಯದ ವ್ಯವಸ್ಥೆ ಇರುತ್ತದೆ. ಆಸಕ್ತರು 10 ನೇ ತರಗತಿ ವ್ಯಾಸಂಗ ಮಾಡಿರುವ 18 ರಿಂದ 50 ವರ್ಷದೊಳಗಿನ ವಯಸ್ಸು ಹೊಂದಿರುವ ಗ್ರಾಮೀಣ ಭಾಗದ ಬಿಪಿಎಲ್ ಅಭ್ಯರ್ಥಿಗಳು ಆಧಾರ್ ಕಾರ್ಡ್ ಜೆರಾಕ್ಸ್, ಗ್ರಾಮೀಣ ಪಡಿತರ ಚೀಟಿ (ಬಿಪಿಎಲ್, ಪಿಎಚ್‌ಎಚ್, ಎನ್‌ಪಿಎಚ್‌ಎಚ್ ಮತ್ತು ಆಯ್‌ವೈ) ಜೆರಾಕ್ಸ್, 4 ಫೋಟೋಗಳು, ಬ್ಯಾಂಕ್ ಪಾಸ್‌ಬುಕ್ ಜೆರಾಕ್ಸ್ ಹಾಗೂ ಪ್ಯಾನ್ ಕಾರ್ಡ್, ಜಾತಿ ಹಾಗೂ ಆದಾಯ ಪ್ರಮಾಣ ಪತ್ರದ ಪತ್ರಿಯೊಂದಿಗೆ ಅರ್ಜಿ ಸಲ್ಲಿಸಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಿರ್ದೇಶಕರು ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾ ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆ (ಆರ್‌ಸೇಟಿ) ಆಶಾಪೂರು ರಸ್ತೆ, ರಾಯಚೂರು. ಅಥವಾ ಮೊಬೈಲ್ ಸಂಖ್ಯೆ: 9742470999, 8217382735ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಗ್ರಾಮೀಣ ಸ್ವಯಂ ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕರಾದ ವಿಜಯಕುಮಾರ್ ಬಡಿಗೇರ್ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ ಮೆಟ್ರಿಕ್ ಪೂರ್ವ ವಸತಿ ನಿಲಯಗಳಿಗೆ ಅರ್ಜಿ ಆಹ್ವಾನ

**ರಾಯಚೂರು ಮೇ.21** :ರಾಯಚೂರು ತಾಲೂಕು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯಿಂದ 2026-27ನೇ ಸಾಲಿಗೆ ಮೆಟ್ರಿಕ್ ಪೂರ್ವ ವಸತಿ ನಿಲಯಗಳಿಗೆ ಅರ್ಹ ವಿದ್ಯಾರ್ಥಿಗಳಿಂದ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದ್ದು, ಆಸಕ್ತ ವಿದ್ಯಾರ್ಥಿಗಳು ಹೆಚ್ಚಿನ ಸಂಖ್ಯೆಯಲ್ಲಿ ಅರ್ಜಿ ಸಲ್ಲಿಸುವಂತೆ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಕಲ್ಯಾಣಾಧಿಕಾರಿಗಳು ಕೋರಿದ್ದಾರೆ.

ಮೆಟ್ರಿಕ್ ಪೂರ್ವ ಬಾಲಕ ಅಥವಾ ಬಾಲಕಿಯರ ವಸತಿ ನಿಲಯಗಳಿಗೆ ಪ್ರವೇಶಕ್ಕಾಗಿ ಹೊಸದಾಗಿ ಬಯಸುವ ಪ್ರವರ್ಗ-1, ಎಎಸ್.ಸಿ & ಎಸ್,ಟಿ ಜಾತಿಯ ವಿದ್ಯಾರ್ಥಿಯ ಆದಾಯಯು 2.50 ಲಕ್ಷ ರೂ. ಹಾಗೂ ಪ್ರವರ್ಗ-2ಎ, 2ಬಿ, 3ಎ 3ಬಿ ಇತರೆ ಜಾತಿಯ ವಿದ್ಯಾರ್ಥಿಯ ಆದಾಯಯು 1. ಲಕ್ಷ ರೂ. ಒಳಗಿರುವವರು ಇಲಾಖೆಯ ವೆಬ್‌ಸೈಟ್ ವಿಳಾಸ: https:// shp.karnataka.gov.in ನಲ್ಲಿ ಜೂನ್ 08ರೊಳಗಾಗಿ ಅರ್ಜಿ ಸಲ್ಲಿಸಬಹುದಾಗಿದೆ.

ತಾಲೂಕುವಾರು ವಿದ್ಯಾರ್ಥಿಗಳ ವಿವರ ಹಾಗೂ ವಿದ್ಯಾರ್ಥಿ ನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ ವಿಳಾಸ: https:// shp.karnataka.gov.in ನ್ನು ನೋಡಬಹುದು.

ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ವೆಬ್‌ಸೈಟ್ ವಿಳಾಸ: bcwd.hostels@karnataka.gov.in ಗೆ ಇ-ಮೇಲ್ ಮುಂಖಾಂತರ ಅಥವಾ ತಾಲೂಕ ಕಲ್ಯಾಣಾಧಿಕಾರಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ರಾಯಚೂರು ದೂರವಾಣಿ ಸಂಖ್ಯೆ: 08532-221072ಗೆ ಸಂಪರ್ಕ ಮಾಡಬಹುದಾಗಿದೆ.

ಹೆಚ್ಚಿನ ಮಾಹಿತಿಗಾಗಿ ತಾಲೂಕ ಕಲ್ಯಾಣಾಧಿಕಾರಿಗಳು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ವಿ.ಜಿ ಕುಲ್ಕರ್ಣಿ ಅಸ್ಪತ್ರೆ ಹತ್ತಿರ ಅನೀರಿಕ್ಷಿತ ಮನೆ ಅಜಾದ್ ನಗರ ಕಾಲೋನಿ ರಾಯಚೂರು, ದೂರವಾಣಿ ಸಂ: 08532-221072ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ತಾಲೂಕು ಕಲ್ಯಾಣಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮನೆ ಮೇಲ್ಛಾವಣೆ ಕುಸಿದು ವೃದ್ಧೆ ಸಾವು



**ವಿಜಯಪುರ, ಮೇ. 21:**ಮನೆಯ ಮೇಲ್ಛಾವಣಿ ಕುಸಿದು ಮಹಿಳೆ ಜೀವಂತ ಸಮಾಧಿಯಾಗಿರುವ ದುರಂತ ಜಿಲ್ಲೆಯ ನಿಡಗುಂದಿ ಪಟ್ಟಣದ ಗೌರೀಶ್ವರ ದೇವಸ್ಥಾನ ಬಳಿ ಗುರುವಾರ ನಸುಕಿನಲ್ಲಿ ನಡೆದಿದೆ.

ನಿಡಗುಂದಿ ನಿವಾಸಿ ಮಹಾದೇವಿ ವಾರದ (55) ಮೃತಪಟ್ಟ ಮಹಿಳೆ.

ಮೊನ್ನೆ ಸುರಿದ ಮಳೆಗೆ ನೆನೆದಿದ್ದ ಹಳೆಯ ಮನೆ ಮೇಲ್ಛಾವಣಿ ಕುಸಿದು ಈ ಅವಘಡ ಸಂಭವಿಸಿದೆ.

ನಸುಕಿನ ಜಾವ ಮನೆಯ ಮೇಲ್ಛಾವಣಿ ಕುಸಿದು ಮಹಾದೇವಿ ಜೀವಂತ ಸಮಾಧಿಯಾಗಿದ್ದಾರೆ.

ಮನೆಯ ಹೊರಗೆ ಮಲಗಿದ್ದ ಪತಿ ಶಿವಾನಂದ ಅಪಾಯದಿಂದ ಪಾರಾಗಿದ್ದಾರೆ.

ಸ್ಥಳಕ್ಕೆ ನಿಡಗುಂದಿ ಪೊಲೀಸರು ಹಾಗೂ ಕಂದಾಯ ಇಲಾಖೆ ಅಧಿಕಾರಿಗಳು ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಮಹಾದೇವಿ ಶವ ಮರಣೋತ್ತರ ಪರೀಕ್ಷೆಗೆ ಆಸ್ಪತ್ರೆಗೆ ರವಾನೆ ಮಾಡಲಾಗಿದೆ.

ಸ್ಥಳದಲ್ಲಿ ಕುಟುಂಬಸ್ಥರ ಆಕ್ರಂದನ ಮುಗಿಲು ಮುಟ್ಟಿದೆ.

ನಿಡಗುಂದಿ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ಘಟನೆ ನಡೆದಿದೆ.

# ಒಂದು ವರ್ಷದ ರಂಗಶಿಕ್ಷಣ ತರಬೇತಿಗೆ ಅರ್ಜಿ ಆಹ್ವಾನ

**ರಾಯಚೂರು ಮೇ.21:** ಮೈಸೂರಿನ ರಂಗಶಿಕ್ಷಣ ಸಂಸ್ಥೆಯ ವತಿಯಿಂದ ಪ್ರಸ್ತುತ 2026-27ನೇ ಸಾಲಿನಲ್ಲಿ ಪ್ರವೇಶಕ್ಕೆ ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ. ಸಂಸ್ಥೆಯು ಕರ್ನಾಟಕ ಸರ್ಕಾರದಿಂದ ಮೈಸೂರಿನಲ್ಲಿ ಸ್ಥಾಪಿತವಾಗಿರುವ ರಂಗಾಯಣ ರೆಪರ್ಟರಿಯು ಕಳೆದ 16 ವರ್ಷಗಳ ಹಿಂದೆ ಸ್ಥಾಪಿಸಿದ ಭಾರತೀಯ ರಂಗಶಿಕ್ಷಣ ಕೇಂದ್ರ ಪೂರ್ಣ ಪ್ರಮಾಣದ ರಂಗಶಿಕ್ಷಣವನ್ನು ನೀಡುವ ಸಂಸ್ಥೆಯಾಗಿದೆ. ಈ ಸಂಸ್ಥೆ ಮೈಸೂರಿನ ಡಾ. ಗಂಗೂಬಾಯಿ ಹಾನಗಲ್ ಸಂಗೀತ ಮತ್ತು ಪ್ರದರ್ಶಕ ಕಲೆಗಳ ವಿಶ್ವವಿದ್ಯಾಲಯದ ಮಾನ್ಯತೆ ಪಡೆದಿದೆ.

ಪ್ರತಿವರ್ಷ ರಂಗಶಿಕ್ಷಣದಲ್ಲಿ ಹತ್ತು ತಿಂಗಳ ಡಿಪ್ಲೊಮೊ ಕೋರ್ಸ್ನ್ನು ನಡೆಸುವ ಈ ಸಂಸ್ಥೆಯು 2026-27ನೇ ಸಾಲಿನ ಈ ರಂಗತರಬೇತಿ ಕೋರ್ಸ್ಗೆ ಸೇರಬಯಸುವ ವಿದ್ಯಾರ್ಥಿಗಳು ರಂಗಭೂಮಿಯ ಪ್ರಾಥಮಿಕ ಅನುಭವ ಹೊಂದಿರಬೇಕು. ಕನಿಷ್ಠ ದ್ವಿತೀಯ ಪಿಯುಸಿ (10+2) ಅಥವಾ ತತ್ಸಮಾನ ಪರೀಕ್ಷೆ ತೇರ್ಗಡೆ ಹೊಂದಿರಬೇಕು. ವಯೋಮಿತಿ ಅರ್ಜಿ ಸಲ್ಲಿಸಲು ನಿಗದಿಗೊಳಿಸಿದ ಕಡೆಯ ದಿನಾಂಕಕ್ಕೆ 18 ವರ್ಷಗಳು ತುಂಬಿದ ಮತ್ತು 28 ವರ್ಷಗಳು ತುಂಬಿರದ ಅಭ್ಯರ್ಥಿಗಳಾಗಿರಬೇಕು. ಆಯ್ಕೆಯಾದ ವಿದ್ಯಾರ್ಥಿಗಳಿಗೆ ಕೋರ್ಸಿನ ಒಂದು ವರ್ಷದ ವ್ಯಾಸಂಗ ಅವಧಿಯಲ್ಲಿ ಊಟ, ವಸತಿ ಹಾಗೂ ಪಠ್ಯ ಸಾಮಗ್ರಿಗಳ ವೆಚ್ಚಗಳನ್ನು ನಿಯಮಾನುಸಾರ ವಿದ್ಯಾರ್ಥಿ ವೇತನದಲ್ಲಿ ಭರಿಸಲಾಗುವುದು.

ಭಾರತೀಯ ರಂಗಶಿಕ್ಷಣ ಕೇಂದ್ರಕ್ಕೆ ಸೇರಬಯಸುವ ವಿದ್ಯಾರ್ಥಿಗಳು ದಿನಾಂಕ: 15.05.2026 ರಿಂದ ರಂಗಾಯಣದ ವೆಬ್‌ಸೈಟ್ ವಿಳಾಸ: http://rangayanamysore.karnataka.gov.in ನಲ್ಲಿ ಅರ್ಜಿ ಡೌನ್‌ಲೋಡ್ ಮಾಡಿಕೊಂಡು ಅಥವಾ ರಂಗಾಯಣದ ಕಚೇರಿ ಅವಧಿಯಲ್ಲಿ ಖುದ್ದಾಗಿ ಪಡೆದು ಅಗತ್ಯ ದಾಖಲೆಗಳೊಂದಿಗೆ ಭರ್ತಿ ಮಾಡಿದ ಅರ್ಜಿಯನ್ನು ಅರ್ಜಿ ಶುಲ್ಕ ಸಾಮಾನ್ಯ ವರ್ಗ 300 ರೂ., ಪ.ಜಾ, ಪ.ವರ್ಗ ಮತ್ತು ಪ್ರವರ್ಗ-1 ಅಭ್ಯರ್ಥಿಗಳಿಗೆ 200 ರೂ.ಗಳು (ರಂಗಕೈಪಿಡಿ ಶುಲ್ಕ 30 ರೂ. ಒಳಗೊಂಡಂತೆ) ಡಿ.ಡಿ.ಯನ್ನು ಉಪ ನಿರ್ದೇಶಕರು, ರಂಗಾಯಣ, ಮೈಸೂರು ಇವರ ಹೆಸರಿನಲ್ಲಿ ಪಡೆದು ರಂಗಾಯಣದ ವಿಳಾಸಕ್ಕೆ ದಿನಾಂಕ:20.06.2026ರ ಸಂಜೆ 5.30ರೊಳಗೆ ತಲುಪುವಂತೆ ಅಂಚೆಯ ಮೂಲಕ ಕಳುಹಿಸಬಹುದು. ಸಂದರ್ಶನದ ದಿನಾಂಕವನ್ನು ಅಭ್ಯರ್ಥಿಗಳಿಗೆ ಪತ್ರ ಮುಖೇನ ತಿಳಿಸಲಾಗುವುದು.

ರಂಗಾಯಣದ ಆವರಣದಲ್ಲಿ ನಡೆಯುವ ಈ ಸಂದರ್ಶನಕ್ಕೆ ವಿದ್ಯಾರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲೇ ಹಾಜರಾಗಬೇಕು. ಗರಿಷ್ಠ 15 ರಿಂದ 20 ವಿದ್ಯಾರ್ಥಿಗಳಿಗೆ ಮಾತ್ರ ಪ್ರವೇಶಾವಕಾಶವಿರುತ್ತದೆ. ಸಂದರ್ಶನದ ದಿನ ಮಧ್ಯಾಹ್ನ ಲಘು ಉಪಹಾರದ ವ್ಯವಸ್ಥೆಯನ್ನು ಮಾತ್ರ ರಂಗಾಯಣದಿಂದ ಮಾಡಲಾಗುವುದು. ಯಾವುದೇ ವಸತಿ ವ್ಯವಸ್ಥೆ ಇರುವುದಿಲ್ಲ.

ಹೆಚ್ಚಿನ ವಿವರಕ್ಕಾಗಿ ದೂರವಾಣಿ ಸಂಖ್ಯೆ:0821-2512639ಗೆ ಸಂಪರ್ಕ ಮಾಡಬಹುದಾಗಿದೆ ಎಂದು ಮೈಸೂರಿನ ರಂಗಾಯಣದ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರೋಗ್ಯ ಇಲಾಖೆಯಿಂದ ವಿವಿಧ ಹುದ್ದೆಗಳ ನೇಮಕಾತಿಗೆ ಅರ್ಜಿ ಆಹ್ವಾನ

**ರಾಯಚೂರು ಮೇ.21:** ರಾಯಚೂರು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧೀನದಲ್ಲಿ ಬರುವ ವಿವಿಧ ಆರೋಗ್ಯ ಸಂಸ್ಥೆಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳು ಮತ್ತು ವಿವಿಧ ತಜ್ಞ ವೈದ್ಯರ ಹುದ್ದೆಗಳನ್ನು ಗುತ್ತಿಗೆ ಆಧಾರದ ಮೇಲೆ ರೋಷ್ಟರ್ ಕಂ ಮೆರಿಟ್ ಅನುಸರಿಸಿ ಭರ್ತಿ ಮಾಡಲು ಅರ್ಹ ಅಭ್ಯರ್ಥಿಗಳಿಂದ ಅರ್ಜಿ ಅಹ್ವಾನಿಸಲಾಗಿದೆ.

ಸ್ತ್ರೀ ರೋಗ ತಜ್ಞರು 6 ಹುದ್ದೆಗಳಿಗೆ (ಎಂಬಿಬಿಎಸ್, ಡಿ.ಜಿ.ಓ/ಎಂ.ಎಸ್ ಓಬಿಜಿ/ಡಿಎನ್ ಬಿ.ಓಬಿಜಿ), ಅರವಳಿಕೆ ತಜ್ಞರು 10 ಹುದ್ದೆಗಳಿಗೆ (ಎಂಬಿಬಿಎಸ್, ಡಿಪ್ಲೋಮಾ ಅನಸ್ಥೀಷಿಯಾ, ಎಂ.ಡಿ ಅನಸ್ಥೀಷಿಯಾ, ಡಿ.ಎನ್.ಬಿ ಅನಸ್ಥೀಷಿಯಾ), ಮಕ್ಕಳ ತಜ್ಞರು 4 ಹುದ್ದೆಗಳಿಗೆ (ಎಂ.ಬಿ.ಬಿ.ಎಸ್, ಡಿ.ಸಿ.ಹೆಚ್, ಎಂ.ಡಿ ಪೀಡಿಯಾಟ್ರಿಕ್, ಡಿ.ಎನ್.ಬಿ ಪೀಡಿಯಾಟ್ರಿಕ್), ಜನರಲ್ ಮೆಡಿಸೆನ್ 2 ಹುದ್ದೆಗಳಿಗೆ (ಎಂಬಿಬಿಎಸ್, ಎಂಡಿ ಜನರಲ್ ಮೆಡಿಸನ್), ಕಿವಿ ಮೂಗು ಗಂಟಲು ತಜ್ಞರು 2 ಹುದ್ದೆಗಳಿಗೆ (ಡಿಪ್ಲೋಮಾ ಇ.ಎನ್.ಟಿ, ಎಂ.ಡಿ ಇ.ಎನ್.ಟಿ), ಚರ್ಮರೋಗ ತಜ್ಞರು 1 ಹುದ್ದೆಗೆ (ಎಂಬಿಬಿಎಸ್, ಡಿವಿಡಿ, ಎಂಡಿ ಡರ್ಮಟಾಲೊಜಿ), ರೇಡಿಯೊಲಾಜಿಸ್ಟ್ 2 ಹುದ್ದೆಗೆ (ಡಿಪ್ಲೋಮಾ ಇನ್ ರೇಡಿಯಾಲಜಿ, ಎಂ.ಡಿ ರೇಡಿಯಾಲೊಜಿ), ತುರ್ತು ಚಿಕಿತ್ಸಾ ವೈದ್ಯಾಧಿಕಾರಿಗಳು 7 ಹುದ್ದೆಗಳಿಗೆ (ಎಂಬಿಬಿಎಸ್), ವೈದ್ಯಾಧಿಕಾರಿಗಳು 20 ಹುದ್ದೆಗಳಿಗೆ (ಎಂ.ಬಿಬಿಎಸ್) ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳು ಮೇ. 27ರಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಕಚೇರಿಯಲ್ಲಿ ನಡೆಯುವ ವಾಕ್ ಇನ್ ಇಂಟರವೀವ್ ಭಾಗವಹಿಸಬಹುದಾಗಿದೆ ಎಂದು ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ವಿದ್ಯುತ್ ಚಿತಾಗಾರ ನಿರ್ಮಾಣ: ಶಾಸಕ ಯತ್ನಾಳ ಭೂಮಿಪೂಜೆ



**ವಿಜಯಪುರ, ಮೇ. 21:** ನಗರದ ವಾರ್ಡ್ ನಂ.8 ರಲ್ಲಿ ಬರುವ ಚಾಲುಕ್ಯ ನಗರ ಪೂರ್ವ ಭಾಗದ ದೇವಗಿರಿಕರ ಸ್ಮಶಾನದಲ್ಲಿ ನಗರ ಮೂಲಸೌಕರ್ಯ ಅಭಿವೃದ್ಧಿ ನಿಧಿ ಅಡಿಯಲ್ಲಿ ಮಂಜೂರಿಸಲಾದ ರೂ.4 ಕೋಟಿ ಅನುದಾನದಲ್ಲಿ ವಿದ್ಯುತ್ ಚಿತಾಗಾರ ನಿರ್ಮಾಣ ಕಾಮಗಾರಿಗೆ ನಗರ ಶಾಸಕ ಬಸನಗೌಡ ಪಾಟೀಲ ಯತ್ನಾಳ ಅವರು ಮಂಗಳವಾರ ಭೂಮಿಪೂಜೆ ನೆರವೇರಿಸಿದರು.

ಭೂಮಿಪೂಜೆ ಬಳಿಕ ಸಾರ್ವಜನಿಕರಿಂದ ಅಹವಾಲು ಆಲಿಸಿ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸುವುದಾಗಿ ಸಕರಾತ್ಮಕವಾಗಿ ಸ್ಪಂದಿಸಿದರು. ಮಹಾನಗರ ಪಾಲಿಕೆ ಮೇಯರ್ ಎಂ.ಎಸ್.ಕರಡಿ, ಸದಸ್ಯರಾದ ರಾಜಶೇಖರ ಮಗಿಮಠ, ಪ್ರೇಮಾನಂದ ಬಿರಾದಾರ, ಅಶೋಕ ನ್ಯಾಮಗೌಡ, ಮಳುಗೌಡ ಪಾಟೀಲ, ಮುಖಂಡರಾದ ರಾಜೇಶ ದೇವಗಿರಿ ಸೇರಿದಂತೆ ಕಾರ್ಯಕರ್ತರು, ಅಭಿಮಾನಿಗಳು ಹಾಗೂ ಸ್ಥಳೀಯ ನಿವಾಸಿಗಳು ಉಪಸ್ಥಿತರಿದ್ದರು.

# ಕಾಂಗ್ರೆಸ್ ಸರ್ಕಾರದ ಅಭಿವೃದ್ಧಿ ಪೇಪರ್‌ನಲ್ಲಿ ಜನರ ಬದುಕು ಮಾತ್ರ ಕತ್ತಲಲ್ಲಿ: ಬಿಜೆಪಿ ಜಿಲ್ಲಾ ಅಧ್ಯಕ್ಷ ಬಸವರಾಜಪ್ಪಗೌಡ ವಿಭೂತಿಹಳ್ಳಿ



**ಯಾದಗಿರಿ:ಮೇ.20:** ರಾಜ್ಯ ಸರ್ಕಾರದ ಮೂರು ವರ್ಷದ ಆಡಳಿತವು ಸಾಧನೆಯ ಅವಧಿಯಲ್ಲ, ಬದಲಾಗಿ "ಮುನ್ನೂರು ವೈಫಲ್ಯಗಳ ಮಾಲಾರ್ಪಣೆ"ಯಾಗಿದೆ ಎಂದು ಬಿಜೆಪಿ ಜಿಲ್ಲಾ ಅಧ್ಯಕ್ಷ ಬಸವರಾಜಪ್ಪಗೌಡ ವಿಭೂತಿಹಳ್ಳಿ ತೀವ್ರ ವಾಗ್ದಾಳಿ ನಡೆಸಿದರು. ಸರ್ಕಾರ ತನ್ನ ವೈಫಲ್ಯಗಳನ್ನು ಮರೆಮಾಚಲು ಸಮಾವೇಶಗಳ ಹೆಸರಿನಲ್ಲಿ ಜನರನ್ನು ತಪ್ಪುದಾರಿಗೆಳೆಯಲು ಯತ್ನಿಸುತ್ತಿದೆ ಎಂದು ಆರೋಪಿಸಿದರು.

ನಗರದಲ್ಲಿ ನಡೆದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಅವರು, ರೈತರು ಸಂಕಷ್ಟದಲ್ಲಿದ್ದರೂ ಸರ್ಕಾರ ಸಮರ್ಪಕ ನೆರವು ನೀಡುವಲ್ಲಿ ವಿಫಲವಾಗಿದೆ ಎಂದು ದೂರಿದರು. ಹಾಲು ಉತ್ಪಾದಕರಿಗೆ ನೀಡಬೇಕಾದ ಪ್ರೋತ್ಸಾಹಧನ ಬಾಕಿಯಿದ್ದು, ಕೃಷಿ ವೆಚ್ಚಗಳು ದಿನದಿಂದ ದಿನಕ್ಕೆ ಏರಿಕೆಯಾಗುತ್ತಿವೆ. ರೈತರ ಆತ್ಮಹತ್ಯೆಗಳ ಸಂಖ್ಯೆ ಹೆಚ್ಚಾಗುತ್ತಿದ್ದರೂ ಸರ್ಕಾರ ಸ್ಪಂದನೆ ತೋರದೇ ರಾಜಕೀಯ ಸಮಾವೇಶಗಳಲ್ಲಿ ನಿರತರಾಗಿದೆ ಎಂದು ಟೀಕಿಸಿದರು.

ಕೇಂದ್ರ ಸರ್ಕಾರ ನೀಡುತ್ತಿರುವ ರಸಗೊಬ್ಬರಗಳನ್ನು ಕಾಳಸಂತೆಯಲ್ಲಿ ಮಾರಾಟ ಮಾಡಲಾಗುತ್ತಿದೆ. ಅಲ್ಲದೆ, ಕೇಂದ್ರದ ಕಿಸಾನ್ ಸನ್ಮಾನ್ ಯೋಜನೆ ಸಮರ್ಪಕವಾಗಿ ಜಾರಿಯಾಗುತ್ತಿಲ್ಲ ಎಂದು ಆರೋಪಿಸಿದರು. ನೀರು, ವಿದ್ಯುತ್, ಭೂ ನೋಂದಣಿ ಸೇರಿದಂತೆ ಬಹುತೇಕ ಸೇವೆಗಳ ದರ ಏರಿಕೆಯಿಂದ ಜನ ಸಾಮಾನ್ಯರ ಬದುಕು ದುಸ್ತರವಾಗಿದೆ ಎಂದರು.

"ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಜನರನ್ನು ಮರುಳು ಮಾಡುವ ಕೆಲಸ ನಡೆಯುತ್ತಿದೆ. ಶಾಶ್ವತ ಅಭಿವೃದ್ಧಿಯ ಬದಲು ಮೋಸದ ರಾಜಕಾರಣವೇ ರಾಜ್ಯದಲ್ಲಿ ನಡೆಯುತ್ತಿದೆ" ಎಂದು ಆರೋಪಿಸಿದ ಅವರು, ಸಾರಿಗೆ ಇಲಾಖೆಯ ಸ್ಥಿತಿಯೂ ದಯನೀಯವಾಗಿದೆ ಎಂದರು. ಕೆಎಸ್‌ಆರ್‌ಟಿಸಿ ನೌಕರರ ಸಮಸ್ಯೆಗಳಿಗೆ ಸರ್ಕಾರ ಸ್ಪಂದಿಸುತ್ತಿಲ್ಲ. ಹಳೆಯ ಬಸ್‌ಗಳೇ ರಸ್ತೆಯಲ್ಲಿ ಸಂಚರಿಸುತ್ತಿದ್ದು, ದುರಸ್ತಿ ಕಾರ್ಯಕ್ಕೂ ಹಣವಿಲ್ಲದ ಪರಿಸ್ಥಿತಿ ನಿರ್ಮಾಣವಾಗಿದೆ ಎಂದು ಆಕ್ರೋಶ ವ್ಯಕ್ತಪಡಿಸಿದರು.

ಅಂಗನವಾಡಿ ನೌಕರರು ಹಾಗೂ ಸರ್ಕಾರಿ ನೌಕರರ ವೇತನ ಸಮಸ್ಯೆಗಳನ್ನೂ ಸರ್ಕಾರ ಗಂಭೀರವಾಗಿ ಪರಿಗಣಿಸಿಲ್ಲ. "ಎಲ್ಲಾ ಇಲಾಖೆಗಳಲ್ಲೂ ಆಡಳಿತ ಸಂಪೂರ್ಣ ಕುಸಿದಿದೆ. ಇಂತಹ ಪರಿಸ್ಥಿತಿಯಲ್ಲಿ ಮೂರು ವರ್ಷದ ಸಾಧನಾ ಸಮಾವೇಶ ಯಾವ ಸಾಧನೆಗಾಗಿ?" ಎಂದು ಪ್ರಶ್ನಿಸಿದರು.

ರಾಜ್ಯದಲ್ಲಿ ಜಾತಿ ಮತ್ತು ಧರ್ಮದ ಆಧಾರದ ಮೇಲೆ ಸಮಾಜವನ್ನು ವಿಭಜಿಸುವ ರಾಜಕಾರಣ ನಡೆಯುತ್ತಿದೆ ಎಂದು ಆರೋಪಿಸಿದ ಅವರು, ಹಿಜಾಬ್ ವಿಚಾರವನ್ನು ಉಲ್ಲೇಖಿಸಿ ಸರ್ಕಾರದ ವಿರುದ್ಧ ಅಸಮಾಧಾನ ವ್ಯಕ್ತಪಡಿಸಿದರು. "ಹಿಜಾಬ್ ಪ್ರಕರಣ ಸುಪ್ರೀಂ ಕೋರ್ಟ್‌ನಲ್ಲಿ ಇರುವಾಗಲೇ ನಿಷೇಧ ಹಿಂಪಡೆಯಲು ಮುಂದಾಗಿರುವುದು ಜನರ ಗಮನ ಬೇರೆಡೆ ಸೆಳೆಯುವ ಪ್ರಯತ್ನ" ಎಂದು ಹೇಳಿದರು.

ವಾಲ್ಮೀಕಿ ಅಭಿವೃದ್ಧಿ ನಿಗಮ ಹಗರಣದ ಕುರಿತು ಮಾತನಾಡಿದ ಅವರು, "ಹಗರಣದ ಹಣಕ್ಕಾಗಿ ಸಮಾವೇಶ ಮಾಡುತ್ತಿದ್ದೀರಾ? ರೈತರ ಸಾವಿಗೆ ಸಮಾವೇಶ ಮಾಡುತ್ತಿದ್ದೀರಾ?" ಎಂದು ಸರ್ಕಾರವನ್ನು ಪ್ರಶ್ನಿಸಿದರು. ಕುಕ್ಕರ್ ಬಾಂಬ್ ಪ್ರಕರಣದ ಆರೋಪಿಗಳನ್ನು "ಬ್ರದರ್" ಎಂದು ಕರೆಯಲಾಗಿದೆ ಎಂದು ಟೀಕಿಸಿದ ಅವರು, ಸರ್ಕಾರ ಯಾವ ಸಾಧನೆಗಾಗಿ ಸಮಾವೇಶ ನಡೆಸುತ್ತಿದೆ ಎಂಬುದನ್ನು ಸ್ಪಷ್ಟಪಡಿಸಬೇಕು ಎಂದರು.

ರಾಜ್ಯದ ಜನರು ಕಾಂಗ್ರೆಸ್ ಆಡಳಿತದಿಂದ ಬೇಸತ್ತಿದ್ದು, "ಸೂರ್ಯ ಮತ್ತು ಚಂದ್ರ ಇರುವಷ್ಟು ಸತ್ಯವಾಗಿ 2028ರಲ್ಲಿ ಕರ್ನಾಟಕದಲ್ಲಿ ಬಿಜೆಪಿ ಸರ್ಕಾರ ಅಧಿಕಾರಕ್ಕೆ ಬರುತ್ತದೆ" ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಇದೇ ವೇಳೆ ರಾಜ್ಯದಲ್ಲಿ ಮೂರು ವರ್ಷಗಳನ್ನು ಪೂರೈಸಿರುವ ಕಾಂಗ್ರೆಸ್ ಸರ್ಕಾರ ಅಭಿವೃದ್ಧಿಯ ಹೆಸರಿನಲ್ಲಿ ಜಾಹೀರಾತುಗಳ ಹಬ್ಬ ನಡೆಸುತ್ತಿದೆಯೇ ಹೊರತು, ಜನಸಾಮಾನ್ಯರ ಬದುಕಿನಲ್ಲಿ ಯಾವುದೇ ಬದಲಾವಣೆ ತರಲು ವಿಫಲವಾಗಿದೆ ಎಂದು ಬಿಜೆಪಿ ಮುಖಂಡರು ಆರೋಪಿಸಿದರು.

ರಾಜ್ಯದಲ್ಲಿ ನಿರುದ್ಯೋಗ, ಬೆಲೆ ಏರಿಕೆ, ರೈತರ ಸಮಸ್ಯೆಗಳು, ಕಾನೂನು ಸುವ್ಯವಸ್ಥೆಯ ಹದಗೆಟ್ಟ ಪರಿಸ್ಥಿತಿ, ಭ್ರಷ್ಟಾಚಾರ, ವಿದ್ಯುತ್ ಹಾಗೂ ಕುಡಿಯುವ ನೀರಿನ ತೊಂದರೆ ಸೇರಿದಂತೆ ಜನಜೀವನಕ್ಕೆ ಸಂಬಂಧಿಸಿದ ಅನೇಕ ಸಮಸ್ಯೆಗಳ ಕುರಿತು ಸರ್ಕಾರ ಸಂಪೂರ್ಣ ನಿರ್ಲಕ್ಷ್ಯ ವಹಿಸಿದೆ ಎಂದು ದೂರಿದರು.

ಗ್ಯಾರಂಟಿ ಯೋಜನೆಗಳ ಹೆಸರಿನಲ್ಲಿ ಜನರನ್ನು ಮೋಸಗೊಳಿಸಲಾಗುತ್ತಿದೆ. ಗ್ರಾಮೀಣ ಭಾಗಗಳಲ್ಲಿ ಅಭಿವೃದ್ಧಿಯ ನೈಜ ಚಿತ್ರಣವೇ ಕಾಣಿಸುತ್ತಿಲ್ಲ. ರಸ್ತೆ, ಕುಡಿಯುವ ನೀರು, ಆರೋಗ್ಯ ಹಾಗೂ ಶಿಕ್ಷಣ ಕ್ಷೇತ್ರಗಳಲ್ಲಿ ಯಾವುದೇ ಸಮರ್ಪಕ ಪ್ರಗತಿ ಕಂಡುಬಂದಿಲ್ಲ ಎಂದು ಟೀಕಿಸಿದರು.

"ಮೂರು ವರ್ಷದ ಸರ್ಕಾರಕ್ಕೆ ಮುನ್ನೂರು ವೈಫಲ್ಯಗಳ ಮಾಲಾರ್ಪಣೆ" ಎಂಬ 33 ಪುಟಗಳ ಸರಮಾಲೆಯಲ್ಲಿ ಸರ್ಕಾರದ ವೈಫಲ್ಯಗಳನ್ನು ದಾಖಲೆ ಸಮೇತ ಜನರ ಮುಂದಿಡಲಾಗಿದೆ. ಅಭಿವೃದ್ಧಿಯ ಹೆಸರಿನಲ್ಲಿ ಜನರನ್ನು ತಪ್ಪು ದಾರಿಗೆಳೆಯುವ ಕೆಲಸ ನಡೆಯುತ್ತಿದೆ. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದ್ದು, ಬೆಲೆ ಏರಿಕೆ ಹಾಗೂ ಭ್ರಷ್ಟಾಚಾರ ದಿನದಿಂದ ದಿನಕ್ಕೆ ಹೆಚ್ಚುತ್ತಿದೆ" ಎಂದು ಆರೋಪಿಸಿದರು.

ಜನರ ಬದುಕು ಸಂಕಷ್ಟದಲ್ಲಿದ್ದರೂ ಸರ್ಕಾರ ಆತ್ಮಪರಿಶೀಲನೆ ಮಾಡದೇ ಸಂಭ್ರಮಾಚರಣೆಯಲ್ಲಿ ತೊಡಗಿರುವುದು ದುರಂತಕರ ಸಂಗತಿ ಎಂದು ಅವರು ಆಕ್ರೋಶ ವ್ಯಕ್ತಪಡಿಸಿದರು. ಸುದ್ದಿಗೋಷ್ಠಿಯಲ್ಲಿ ನಾಗರತ್ನಾ ಕುಪ್ಪಿ, ಡಾ. ಶರಣಭೂಪಾಲರಡ್ಡಿ ನಾಯ್ಕಲ್, ಮಹೇಶರಡ್ಡಿಗೌಡ ಮುದ್ನಾಳ, ಮೇಲಪ್ಪ ಗುಳಗಿ, ಪರಶುರಾಮ ಕುರಕುಂದಿ, ತಿರುಪತಿರಡ್ಡಿ ಸೇರಿದಂತೆ ಹಲವು ಮುಖಂಡರು ಉಪಸ್ಥಿತರಿದ್ದರು.

# ತಂತ್ರಜ್ಞಾನವಿಲ್ಲದೆ ಭವಿಷ್ಯವಿಲ್ಲ :ಡಾ. ಬಿ.ಎಸ್. ಬಿರಾದರ



**ಬೀದರ:ಮೇ.21:**ಇಂದಿನ ಜಗತ್ತಿನ ಜ್ವಲಂತ ಸಮಸ್ಯೆಗಳ ಪರಿಹಾರಕ್ಕೆ ತಂತ್ರಜ್ಞಾನ ಅತ್ಯಂತ ಪ್ರಮುಖವಾದ ಪಾತ್ರವಹಿಸುತ್ತಿದೆ "ತಂತ್ರಜ್ಞಾನವಿಲ್ಲದೆ ಭವಿಷ್ಯವಿಲ್ಲ" ಎಂಬುದು ಇಂದಿನ ಕಾಲಘಟ್ಟದ ಸತ್ಯವಾಗಿದ್ದು, ಹೊಸ ತಂತ್ರಜ್ಞಾನಗಳ ಅಭಿವೃದ್ಧಿಗೆ ಹೆಚ್ಚಿನ ಹೂಡಿಕೆ ಅಗತ್ಯವಾಗಿದೆ. ಆದರೆ ಅದರ ಲಾಭ-ನಷ್ಟಗಳ ಬಗ್ಗೆ ಸಮಾಜ ಜಾಗೃತಿಯಾಗಬೇಕೆಂದ ಎಂದು ಬೀದರ ವಿಶ್ವವಿದ್ಯಾಲಯದ ಉಪಕುಲಪತಿಗಳಾದ ಡಾ. ಬಿ.ಎಸ್. ಬಿರಾದಾರ ಎಂದರು.

ಅವರು ನಗರದ ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಕರ್ನಾಟಕ ಕಲಾ, ವಿಜ್ಞಾನ ಹಾಗೂ ವಾಣಿಜ್ಯ ಮಹಾವಿದ್ಯಾಲಯ, ಬೀದರದ ವಾಣಿಜ್ಯ ವಿಭಾಗದ ವತಿಯಿಂದ "ವಿಕಸಿತ ಭಾರತ @ 2047 ಕನಸಿನ ಸಾಕಾರಕ್ಕಾಗಿ ವಾಣಿಜ್ಯ ಮತ್ತು ನಿರ್ವಹಣೆಯಲ್ಲಿ ಇತ್ತೀಚಿನ ಪ್ರವೃತ್ತಿಗಳು ಹಾಗೂ ನವೀನತೆಗಳು"ಎಂಬ ವಿಷಯದ ಕುರಿತು ಎರಡು ದಿನಗಳ ರಾಷ್ಟ್ರಮಟ್ಟದ ಸಮ್ಮೇಳನವು ಮಹಾವಿದ್ಯಾಲಯದ ಸಭಾಂಗಣದಲ್ಲಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ ತಂತ್ರಜ್ಞಾನದಿಂದಾಗುವ ಅನಾಹುತಗಳಿಗೆ ಯಾರು ಹೊಣೆಗಾರರು ಎಂಬ ಪ್ರಶ್ನೆ ಇಂದಿನ ಸಮಾಜದ ಮುಂದೆ ದೊಡ್ಡ ಸವಾಲಾಗಿ ಪರಿಣಮಿಸಿದೆ ಎಂದು ಅಭಿಪ್ರಾಯಪಟ್ಟ ಅವರು, ಇತ್ತೀಚಿನ ದಿನಗಳಲ್ಲಿ ಪ್ರಾಧ್ಯಾಪಕರು ಹಾಗೂ ಸಂಶೋಧಕರು ತಂತ್ರಜ್ಞಾನದ ನೆರವಿನಿಂದ ಅನೇಕ ಲೇಖನಗಳನ್ನು ಪ್ರಕಟಿಸುತ್ತಿದ್ದರೂ, ಸ್ವಂತ ಚಿಂತನೆ ಮತ್ತು ಬೌದ್ಧಿಕ ಸಾಮರ್ಥ್ಯವನ್ನು ಬೆಳೆಸಿಕೊಳ್ಳುವುದು ಅಗತ್ಯವೆಂದು ಹೇಳಿದರು. ಸ್ವಂತ ಸಂಶೋಧನೆ ಹಾಗೂ ಆವಿಷ್ಕಾರಗಳ ಮೂಲಕ ಸಮಾಜ ಮತ್ತು ರಾಷ್ಟ್ರದ ಅಭಿವೃದ್ಧಿಗೆ ಕೈಜೋಡಿಸಬೇಕೆಂದು ಕರೆ ನೀಡಿದರು.

ಆಧುನಿಕ ಯುಗಕ್ಕೆ ತಕ್ಕಂತೆ ತರಗತಿ ಬೋಧನೆ ಹಾಗೂ ಪ್ರಾಯೋಗಿಕ ಅಧ್ಯಯನವನ್ನು ವಾಣಿಜ್ಯ ಶಿಕ್ಷಣದಲ್ಲಿ ಅಳವಡಿಸಿಕೊಳ್ಳುವುದು ಅತ್ಯವಶ್ಯಕವಾಗಿದೆ ಎಂದು ತಿಳಿಸಿದ ಅವರು, ವಿದ್ಯಾರ್ಥಿಗಳು ತಮ್ಮ ಪಾಲಕರ ಕನಸುಗಳನ್ನು ನನಸಾಗಿಸುವ ದಿಕ್ಕಿನಲ್ಲಿ ಶ್ರಮಿಸಬೇಕೆಂದು ಪ್ರೇರೇಪಿಸಿದರು.

ಕಾರ್ಯಕ್ರಮದಲ್ಲಿ ಮಾತನಾಡಿದ ಲಘು ಉದ್ಯೋಗ ಭಾರತಿ, ಬೀದರ ಘಟಕದ ಅಧ್ಯಕ್ಷರಾದ ಶ್ರೀ ಸಚ್ಚಿದಾನಂದ ಚಿದ್ರಿ ಅವರು, ದೇಶದ ಜನಸಂಖ್ಯೆಗೆ ಅನುಗುಣವಾಗಿ ಕೈಗಾರಿಕೆಗಳು ಹಾಗೂ ತಂತ್ರಜ್ಞಾನ ಅಭಿವೃದ್ಧಿಯಾಗಬೇಕಿದೆ ಎಂದು ಅಭಿಪ್ರಾಯಪಟ್ಟರು. ಕೈಗಾರಿಕೆ ಮತ್ತು ಶಿಕ್ಷಣ ಪರಸ್ಪರ ಪೂರಕವಾಗಿದ್ದು, ಯುವಜನತೆ ಉದ್ಯಮಶೀಲತೆಯತ್ತ ಮುಖ ಮಾಡಬೇಕೆಂದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ರಾಷ್ಟ್ರೀಯ ಶಿಕ್ಷಣ ಸಂಸ್ಥೆಯ ಅಧ್ಯಕ್ಷರಾದ ಶ್ರೀ ಬಸವರಾಜ ಜಾಬಶೆಟ್ಟಿ ಅವರು, ವಿದ್ಯಾರ್ಥಿಗಳು ಪದವಿ ಪೂರ್ಣಗೊಳಿಸಿದ ನಂತರ ಉದ್ಯೋಗಕ್ಕಾಗಿ ಅಲೆದಾಡುವವರಾಗದೆ, ಸ್ವಂತ ಉದ್ಯೋಗ ಸೃಷ್ಟಿಸಿ ಇತರರಿಗೆ ಉದ್ಯೋಗ ನೀಡುವ ಮಟ್ಟಕ್ಕೆ ಬೆಳೆಯಬೇಕು ಎಂದು ಕರೆ ನೀಡಿದರು. ಆತ್ಮನಿರ್ಭರತೆ ಮತ್ತು ಉದ್ಯಮಶೀಲತೆಯ ಮನೋಭಾವವೇ ದೇಶದ ಅಭಿವೃದ್ಧಿಗೆ ಬುನಾದಿಯಾಗುತ್ತದೆ ಎಂದರು.

ಕಾರ್ಯಕ್ರಮದಲ್ಲಿ ಮುಖ್ಯ ಭಾಷಣಕಾರರಾಗಿ ಉಸ್ಮಾನಿಯಾ ವಿಶ್ವವಿದ್ಯಾಲಯದ ಹಿರಿಯ ವಾಣಿಜ್ಯ ಪ್ರಾಧ್ಯಾಪಕರಾದ ಡಾ. ಡಿ. ಚೆನ್ನಪ್ಪ ತಮ್ಮ ಅಮುಲ್ಯವಾದ ಉಪನ್ಯಾಸ ನೀಡಿದರು, ಜಿಲ್ಲಾ ಕೈಗಾರಿಕಾ ಕೇಂದ್ರದ ಜಂಟಿ ನಿರ್ದೇಶಕರಾದ ಸಂಸ್ಥೆಯ ಕಾರ್ಯದರ್ಶಿಗಳಾದ ಶ್ರೀ ಸತೀಶ ಪಾಟೀಲ, ಜಂಟಿ ಕಾರ್ಯದರ್ಶಿಗಳಾದ ಶ್ರೀ ಶಿವಾನಂದ ಗಾದಗಿ ಸೇರಿದಂತೆ ಆಡಳಿತ ಮಂಡಳಿಯ ಸದಸ್ಯರಾದ ಶ್ರೀ ವೀರಭದ್ರಪ್ಪಾ ಬುಯ್ಯ, ಶ್ರೀ ರವಿ ಹಾಲಹಳ್ಳಿ, ಶ್ರೀ ಕಮಲಾಪುರ ಸಿದ್ದರಾಜ ಪಾಟೀಲ, ಡಾ. ಧುಳಪ್ಪ ಪಾಟೀಲ ಸೇರಿದಂತೆ ಹಳೆ ವಿದ್ಯಾರ್ಥಿ ಸಂಘದ ಅಧ್ಯಕ್ಷರು, ಉಪಾಧ್ಯಕ್ಷರು, ಕಾರ್ಯದರ್ಶಿಗಳು ಹಾಗೂ ವಿವಿಧ ಕಾಲೇಜುಗಳ ಪ್ರಾಚಾರ್ಯರು, ಸಂಶೋಧಕರು ಹಾಗೂ 200 ಕ್ಕಿಂತ ಹೆಚ್ಚಿನ ಪ್ರತಿನಿಧಿಗಳು, ಸಂಶೋಧಕರು ಹಾಗೂ ವಿದ್ಯಾರ್ಥಿಗಳು ಬೇರೆ ಬೇರೆ ರಾಜ್ಯಗಳಿಂದ ಈ ಕಾರ್ಯಕ್ರಮದಲ್ಲಿ ಭಾಗವಹಿಸಿದರು.

ಮಹಾವಿದ್ಯಾಲಯದ ಪ್ರಾಂಶುಪಾಲರಾದ ಶ್ರೀ ಸೋಮನಾಥ ಬಿರಾದಾರ, ಎಲ್ಲರನ್ನ ಸ್ವಾಗತಿಸಿದರು. ವಾಣಿಜ್ಯ ವಿಭಾಗದ ಮುಖ್ಯಸ್ಥರು ಹಾಗೂ ಸಮ್ಮೇಳನದ ರುವಾರಿಗಳಾದ ಡಾ. ಶಶಿಧರ ಪಾಟೀಲ ಕಾರ್ಯಕ್ರಮವನ್ನು ಉದ್ದೇಶಿಸಿ ಮಾತನಾಡಿದು. ಸ್ವಾತಿ ಅಡ್ಡೆ ವಾಣಿಜ್ಯ ವಿಭಾಗದ ಪ್ರಾಧ್ಯಪಕರು ವಂದಿಸಿದರು, ಐಕ್ಯೂಎಸಿ ಸಂಯೋಜಕರಾದ ಡಾ. ಸೋಮೇಶ್ವರಿ ಮುದ್ದಾ, ಪ್ರಾಧ್ಯಾಪಕರು, ಸಂಶೋಧಕರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು.

Owned, and published by SYED AHAMAD HUSSAINI MATWALE from Ward No,21 S S Matwale Hussaini Saheb Dargha, Jummal Doddi, Po-Manvi,Raichur, Karnataka -584123.
Printed at Hulkoti, New Court, Opposite Plot No, 28, RS No 312/3B, Garag Complex, Gadag, Karnataka-582101 Editor: SYED AHAMAD HUSSAINI MATWALE